# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 46 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 23–08–2023 ಬುಧವಾರ | ಪುಟ: 4 | ಬೆಲೆ : ರೂ.2–00
Volume - 01 Issue - 46 | Title- Code: KARKAN 28269 | Chitradurga | Date: 23-08-2023 Wednesday | Page: 4 | Price: Rs. 2-00



ಒಳಪುಟದ ಸುದ್ದಿಗಳು

ಶಿಕ್ಷಕರು ತೋರಿದ ಹಾದಿಯಲ್ಲ ಜೀವನ ರೂಪಿಸಿಕೊಳ್ಳಬೇಕು: ಬಿ.ಜಿ.ಗೋವಿಂದಪ್ಪ 2

ಜಿಲ್ಲೆಯಲ್ಲಿ ಸಾರ್ವಜನಿಕರ ಸುರಕ್ಷಿತ ಪ್ರಯಾಣ ಸುಗಮ ಸಂಚಾರಕ್ಕೆ ಅಗತ್ಯವಿರುವ ಕ್ರಮಕೈಗೊಳ್ಳಿ: ಡಾ.ವೆಂಕಟೇಶ್ 3

ತಳಕು ಗ್ರಾಪಂನಲ್ಲಿ ಸಭೆ ನಡೆಸದೆ 10.50 ಲಕ್ಷ ಹಣ ದುರುಪಯೋಗ 4


## ಫಾಸ್ಟ್ ನ್ಯೂಸ್

### ಇಂದು "ಡೆಂಗಿ ಜಾಗೃತಿ ರಥ"ಕ್ಕೆ ಚಾಲನೆ

» ಚಿತ್ರದುರ್ಗ

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯು ಜಿಲ್ಲೆಯ ಗ್ರಾಮೀಣ ಪ್ರದೇಶಗಳಲ್ಲಿ ಕೀಟಜನ್ಯ ರೋಗಗಳ ತಡೆ ಕುರಿತಂತೆ ಸಾರ್ವಜನಿಕರಲ್ಲಿ ಜಾಗೃತಿ ಮೂಡಸಲು "ಡೆಂಗಿ ಜಾಗೃತಿ ರಥ" ಅಭಿಯಾನ ಹಮ್ಮಿಕೊಂಡಿದ್ದು, ಆ. 23 ರಂದು ಬೆಳಿಗ್ಗೆ 10.30 ಗಂಟೆಗೆ ಚಿತ್ರದುರ್ಗ ನಗರದ ಒನಕೆ ಓಬವ್ವ ಕ್ರೀಡಾಂಗಣ ಮುಂಭಾಗ, ಬುದ್ಧ ನಗರದಲ್ಲಿರುವ ನಗರ ಆರೋಗ್ಯ ಕೇಂದ್ರ ಆವರಣದಲ್ಲಿ ಜಿ.ಪಂ. ಸಿಇಓ ಸೋಮಶೇಖರ್ ಅವರು ರಥಕ್ಕೆ ಹಸಿರು ನಿಶಾನೆ ತೋರುವ ಮೂಲಕ ಚಾಲನೆ ನೀಡುವರು. ಸೊಳ್ಳೆಗಳಿಂದ, ಕೀಟಗಳಿಂದ ಹರಡಬಹುದಾದ ವಿವಿಧ ರೋಗಗಳನ್ನು ತಡೆಗಟ್ಟಲು ಜಿಲ್ಲೆಯ ಗ್ರಾಮೀಣ ಪ್ರದೇಶಗಳಲ್ಲಿನ ಸಾರ್ವಜನಿಕರಿಗೆ ಅರಿವು ಮೂಡಿಸುವ ಉದ್ದೇಶದಿಂದ ಆರೋಗ್ಯ ಇಲಾಖೆ "ಡೆಂಗಿ ಜಾಗೃತಿ ರಥ" ಅಭಿಯಾನ ಕೈಗೊಂಡಿದ್ದು, ಈ ರಥವು ಜಿಲ್ಲೆಯ ಗ್ರಾಮಾಂತರ ಪ್ರದೇಶಗಳಲ್ಲಿ ಸಂಚರಿಸಿ ಜನರಲ್ಲಿ ಜಾಗೃತಿ ಮೂಡಿಸಲಿದೆ ಎಂದು ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣಾಧಿಕಾರಿ ಡಾ. ಕಾಶಿ ತಿಳಿಸಿದ್ದಾರೆ.

### ಟೈಲರ್ ಹುದ್ದೆಗಳ ನೇಮಕ್ಕೆ ಉದ್ಯೋಗ ಮೇಳ

» ಚಿತ್ರದುರ್ಗ

ಹಾಸನದ ಹಿಮತ್‌ಸಿಂಗಕ ಲಿನೆಸ್ ಕೈಗಾರಿಕೆಯಲ್ಲಿ ಖಾಲಿ ಇರುವ ಟೈಲರ್‌ಗಳು, ನಿರ್ವಾಹಕರು ಮತ್ತು ಸಹಾಯಕ ಹುದ್ದೆಗಳ ನೇಮಕ್ಕೆ ಉದ್ಯೋಗ ಮೇಳ ಆಯೋಜಿಸಲಾಗಿದೆ. ಹಿಮತ್‌ಸಿಂಗಕ ಲಿನೆಸ್, ಕೆ.ಐ.ಎ.ಡಿ.ಬಿ ಇಡಂಸ್ಟ್ರೀಯಲ್ ರೋಡ್, ಹನುಮಂತಪುರ ಪೋಸ್ಟ್ ಹಾಸನ, ಇಲ್ಲಿ ಆಗಸ್ಟ್ 29 ರಂದು ಬೆಳಿಗ್ಗೆ 10 ಗಂಟೆಗೆ ಉದ್ಯೋಗ ಮೇಳ ಜರುಗಲಿದೆ. 18 ರಿಂದ 30 ವರ್ಷ ವಯೋಮಾನದ 150 ಸೆ.ಮೀ. ಎತ್ತರ ಕನಿಷ್ಠ 8ನೇ ತರಗತಿ ಉತ್ತೀರ್ಣಗೊಂಡ ಮಹಿಳಾ ಅಭ್ಯರ್ಥಿಗಳು ವಿದ್ಯಾರ್ಹತೆ ದಾಖಲೆ ಪತ್ರ, ಆಧಾರ್ ಕಾರ್ಡ್ –4 ಪ್ರತಿ, ಬಯೋಡೆಟಾ, 6 ಭಾವಚಿತ್ರಗಳೊಂದಿಗೆ ಭಾಗವಹಿಸಬಹುದು. ಹೆಚ್ಚಿನ ಮಾಹಿತಿಗಾಗಿ ಹಾಸನ ಜಿಲ್ಲಾ ಕೌಶಲ್ಯಾಭಿವೃದ್ಧಿ ಕಚೇರಿಯ ಸಹಾಯಕ ಸಾಂಖ್ಯಿಕ ಅಧಿಕಾರಿ ಪೂರ್ಣೇಶ, ಮೊಬೈಲ್ ಸಂಖ್ಯೆ 9742871492 ಹಾಗೂ ಹಿಮತ್‌ಸಿಂಗಕ ಲಿನೆಸ್ ಮಾನವ ಸಂಪನ್ಮೂಲ ವಿಭಾಗದ ವ್ಯವಸ್ಥಾಪಕ ಗುರುರಾಜ್ ರಾವ್, ಮೊಬೈಲ್ ಸಂಖ್ಯೆ 9742215015 ಸಂಪರ್ಕಿಸಬಹುದು ಎಂದು ಚಿತ್ರದುರ್ಗ ಜಿಲ್ಲಾ ಕೌಶಲ್ಯ ಅಭಿವೃದ್ಧಿ ಅಧಿಕಾರಿ ಕೆ.ಗೋಪಾಲ ರೆಡ್ಡಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಕಾನೂನು ಅರಿವು ನೆರವು

» ದಾವಣಗೆರೆ

ಆರ್.ಎಲ್ ಕಾನೂನು ಕಾಲೇಜು, ಎಸ್.ಎಸ್ ಕೇರ್ ಟ್ರಸ್ಟ್, ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ, ಜಿಲ್ಲಾ ವಕೀಲರ ಸಂಘ, ಗ್ರಾಮ ಪಂಚಾಯಿತಿ ಕಕ್ಕರಗೊಳ್ಳ, ಹಾಗೂ ಸ್ಥಳೀಯ ಸಂಘ ಸಂಸ್ಥೆಗಳ ಸಹಯೋಗದೊಂದಿಗೆ ಆಗಸ್ಟ್ 23 ರಂದು ಬೆಳಿಗ್ಗೆ 11 ಗಂಟೆಗೆ ಕಕ್ಕರಗೊಳ್ಳದ ಬಿಷರ್ಘ್ನೇಶ್ವರ ಸಮುದಾಯ ಭವನದಲ್ಲಿ ಒಂದು ದಿನದ ಕಾನೂನು ಅರಿವು, ನೆರವು ಕಾರ್ಯಕ್ರಮವನ್ನು ಆಯೋಜಿಸಲಾಗಿದೆ. ಬಾಪೂಜಿ ವಿದ್ಯಾಸಂಸ್ಥೆಯ ಆಡಳಿತ ಮಂಡಳಿಯ ಸದಸ್ಯರು ಹಾಗೂ ಎಸ್.ಎಸ್.ಕೇರ್ ಟ್ರಸ್ಟ್‌ನ ಲೈಫ್ ಟ್ರಸ್ಟಿಗಳಾದ ಡಾ. ಪ್ರಭಾ ಮಲ್ಲಿಕಾರ್ಜುನ್ ಕಾರ್ಯಕ್ರಮವನ್ನು ಉದ್ಘಾಟಿಸುವರು. ಜಿ.ಪಂ ಮಾಜಿ ಸದಸ್ಯರಾದ ಕೆ.ಬಿ ಬಸವನಗೌಡ್ರು ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಕಾರ್ಯದರ್ಶಿ ನ್ಯಾಯಾಧೀಶರಾದ ಮಹಾವೀರ್ ಎಂ ಕರಣ್ಣನವರ್ ಬೆಂಗಳೂರು ವಿಶ್ವವಿದ್ಯಾನಿಲಯದ ವಿಶ್ರಾಂತ ಉಪಕುಲಪತಿಗಳಾದ ಪ್ರೊ.ಡಾ.ಕೆ.ಸಿದ್ದಪ್ಪ, ಆರ್.ಎಲ್ ಕಾಲೇಜಿನ ಪ್ರಾಂಶುಪಾಲರಾದ ಡಾ.ಜಿ.ಎಸ್. ಯತೀಶ್ ಭಾಗವಹಿಸುವರು. ಸಂಜೆ 5 ಗಂಟೆಗೆ ಕಾರ್ಯಕ್ರಮದ ಸಮಾರೋಪ ಸಮಾರಂಭವನ್ನು ಏರ್ಪಡಿಸಲಾಗಿದೆ.

### ರೈತರಿಂದ ಅರ್ಜಿ ಆಹ್ವಾನ

» ದಾವಣಗೆರೆ

ರಾಷ್ಟ್ರೀಯ ತೋಟಗಾರಿಕೆ ಮಿಷನ್ ಯೋಜನೆಯಡಿ ಪ್ರಸಕ್ತ ಸಾಲಿನಲ್ಲಿ ವಿವಿಧ ಕಾರ್ಯಕ್ರಮಗಳಿಗೆ ಅರ್ಹ ಫಲಾನುಭವಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಈ ಯೋಜನೆಯ ಬಗ್ಗೆ ಹೆಚ್ಚಿನ ಮಾಹಿತಿಗೆ ಹಾಗೂ ಅರ್ಜಿ ಸಲ್ಲಿಸಲು ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು ದಾವಣಗೆರೆ ತಾಲ್ಲೂಕಿನ ಕಚೇರಿಗೆ ಭೇಟಿ ನೀಡಲು ಜಿ.ಪಂ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು ತಿಳಿಸಿದ್ದಾರೆ.

# ಹಿರಿಯೂರು ಮೇಟಿಕುರ್ಕೆ ಬಳಿ 1194 ಎಕರೆ ಕೈಗಾರಿಕಾ ಪ್ರದೇಶ ಅಭಿವೃದ್ಧಿ

## ಜಿಲ್ಲೆಯಲ್ಲಿ 6 ಬೃಹತ್ ಕೈಗಾರಿಕೆಗಳ ಸ್ಥಾಪನೆ ನಿರೀಕ್ಷೆ: ಜಿಲ್ಲಾ ಕೈಗಾರಿಕಾ ಕೇಂದ್ರದ ಜಂಟಿ ನಿರ್ದೇಶಕ ಬಿ.ಆನಂದ

» ಚಿತ್ರದುರ್ಗ

ಹಿರಿಯೂರಿನ ಮೇಟಿಕುರ್ಕೆ ಬಳಿ 1194 ಎಕರೆ ಭೂಮಿಯನ್ನು ರೈತರಿಂದ ಪಡೆದು, ಕೆ.ಐ.ಎ.ಡಿ.ಬಿ(ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿ)ಯಿಂದ ಅಭಿವೃದ್ಧಿ ಮಾಡಲಾಗುತ್ತಿದೆ. ಜಿಂದಾಲ್, ಪ್ರಕಾಶ್ ಸ್ಪಾಂಜ್ ಐರನ್, ವಿಜಯದುರ್ಗ ಐರನ್ ಓರ್, ಇಂಡಸ್ಟ್ರೀಸ್ ಸೇರಿದಂತೆ 6 ಪ್ರತಿಷ್ಠಿತ ಉದ್ದಿಮೆದಾರರು ಶೀಘ್ರವೇ ಜಿಲ್ಲೆಯಲ್ಲಿ ಬೃಹತ್ ಕೈಗಾರಿಕೆಗಳ ಸ್ಥಾಪನೆ ಮಾಡುವ ನಿರೀಕ್ಷೆ ಇದೆ ಎಂದು ಜಿಲ್ಲಾ ಕೈಗಾರಿಕಾ ಕೇಂದ್ರದ ಜಂಟಿ ನಿರ್ದೇಶಕ ಬಿ.ಆನಂದ ಹೇಳಿದರು.



ನಗರದ ಐಶ್ವರ್ಯಫೋರ್ಟ್ ಸಭಾಂಗಣದಲ್ಲಿ ಮಂಗಳವಾರ ಕರ್ನಾಟಕ ರಾಜ್ಯ ಹಣಕಾಸು ಸಂಸ್ಥೆ ಚಿತ್ರದುರ್ಗ ಹಾಗೂ ಶಿವಮೊಗ್ಗ ಶಾಖಾ ಕಚೇರಿ ವತಿಯಿಂದ ಆಯೋಜಿಸಲಾದ "ಉದ್ದಿಮೆದಾರರ ಸಮಾವೇಶ"ದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಕೈಗಾರಿಕೆಯಲ್ಲಿ ಹಿಂದುಳಿದ ಚಿತ್ರದುರ್ಗ ಜಿಲ್ಲೆಯನ್ನು ಅಭಿವೃದ್ಧಿ ಪಡಿಸಲು ಚಿಂತಿಸಲಾಗುತ್ತಿದೆ. ಚಿತ್ರದುರ್ಗ ನಗರ ಹೊರತುಪಡಿಸಿ ಜಿಲ್ಲೆಯ ಬೇರೆ ನಗರ ಪ್ರದೇಶಗಳ ವ್ಯಾಪ್ತಿಯಲ್ಲಿ ಎಲ್ಲಿಯೂ ಕೈಗಾರಿಕೆ ಪ್ರದೇಶಗಳು ಇರಲಿಲ್ಲ. ಈ ನಿಟ್ಟಿನಲ್ಲಿ ಎರಡು ವರ್ಷಗಳ ಕಾಲ ಸತತ ಪ್ರಯತ್ನ ಮಾಡಿ, ಹಿರಿಯೂರಿನ ಮೇಟಿಕುರ್ಕೆ ಬಳಿ ಕೈಗಾರಿಕೆ ಪ್ರದೇಶ ನಿರ್ಮಾಣಕ್ಕೆ ಟೆಂಡರ್ ಕರೆಯಲಾಗಿದೆ. ಮುಂದಿನ 6 ತಿಂಗಳ ಒಳಗಾಗಿ ಕೈಗಾರಿಕೆ ಪ್ರದೇಶ ಅಭಿವೃದ್ಧಿ ಮಾಡಲಾಗುವುದು. ಮುಂದಿನ ಒಂದು ವರ್ಷದ ಒಳಗಾಗಿ ಈ ಪ್ರದೇಶದಲ್ಲಿ ಬೃಹತ್ ಕೈಗಾರಿಕೆಗಳು ಸ್ಥಾಪನೆಯಾಗಲಿವೆ ಎಂದರು.

ಬಳ್ಳಾರಿಯ ವಿಜಯ್ ಮಿತ್ತಲ್ ಕಂಪನಿಯವರು ಸಹ ರೂ.500 ಕೋಟಿ ಹೂಡಿಕೆ ಮಾಡಲು ಸಿದ್ದರಿದ್ದಾರೆ. ಬೃಹತ್ ಕೈಗಾರಿಕೆಗಳು ಆಗಮಿಸಿದ ಪರಿಣಾಮವಾಗಿ ಜಿಲ್ಲೆಯ ಸಣ್ಣಪುಟ್ಟ ಕೈಗಾರಿಕೆಗಳಿಗೂ ಅನುಕೂಲವಾಗಿದೆ. ನೂತನ ಕೈಗಾರಿಕೆ ನೀತಿಯಲ್ಲಿ ಬಿಯ್ಯಾಂಡ್ ಬೆಂಗಳೂರಿಗೆ ಆದ್ಯತೆ ನೀಡಲಾಗಿದೆ. 2 ಹಾಗೂ 3 ನೇ ಹಂತ ನಗರದಲ್ಲಿ ಕೈಗಾರಿಕೆಗಳನ್ನು ಸ್ಥಾಪನೆ ಮಾಡಲಾಗುವುದು. ಚೆನ್ನೈ ಬೆಂಗಳೂರು ಹೈವೆಯನ್ನು ರೂ. 50 ಸಾವಿರ ಕೋಟಿಯಲ್ಲಿ ಅಭಿವೃದ್ಧಿ ಪಡಿಸಲಾಗುತ್ತಿದೆ. ಚಳ್ಳಕೆರೆ ದೊಡ್ಡ ಉಳ್ಳಾರ್ತಿ ಬಳಿ 250 ಎಕರೆ ಕೈಗಾರಿಕೆ ಪ್ರದೇಶವನ್ನು ಕೆ.ಎಸ್.ಎಸ್.ಐ.ಡಿ.ಸಿ(ಕರ್ನಾಟಕ ರಾಜ್ಯ ಸಣ್ಣ ಕೈಗಾರಿಕೆ ಅಭಿವೃದ್ಧಿ ಮಂಡಳಿ) ಅಭಿವೃದ್ಧಿ ಪಡಿಸಲಾಗಿದೆ. ಕೆ.ಐ.ಎ.ಡಿ.ಬಿ ಯಲ್ಲಿ ಪರಿಶಿಷ್ಠ ಜಾತಿಯವರಿಗೆ ಕೈಗಾರಿಕೆ ನಿವೇಶನ ಖರೀದಿಯಲ್ಲಿ ಶೇ.75 ರಷ್ಟು ರಿಯಾಯಿತಿಯನ್ನು ನೀಡಲಾಗುವುದು. ಇದೇ ಯೋಜನೆಯನ್ನು ಸಾಮಾನ್ಯ ಉದ್ದಿಮೆದಾರಿಗೂ ವಿಸ್ತರಿಸುವ ಬಗ್ಗೆ ನೂತನ ಕೈಗಾರಿಕೆ ನೀತಿಯಲ್ಲಿ ರಾಜ್ಯ ಸರ್ಕಾರ ಚಿಂತನೆ ನಡೆಸಿದೆ. ಜಿಲ್ಲೆಯ ಎಲ್ಲಾ ತಾಲ್ಲೂಕುಗಳನ್ನು ಹಿಂದುಳಿದ ಪಟ್ಟಿಗೆ ಸೇರಿಸಿ ಸರ್ಕಾರದಿಂದ ಕೈಗಾರಿಕೆ ಸ್ಥಾಪನೆಗೆ ಹೆಚ್ಚಿನ ನೆರವು ಪಡೆಯಲಾಗುವುದು ಎಂದು ಬಿ. ಆನಂದ್ ಅವರು ಹೇಳಿದರು.

ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಜವಳಿ ಮತ್ತು ಕೈಮಗ್ಗ ಇಲಾಖೆ ಉಪನಿರ್ದೇಶಕ ಲಕ್ಷ್ಮಣ ತಳವಾರ, ಚಿತ್ರದುರ್ಗ ಜಿಲ್ಲೆಯಲ್ಲಿ ಸುಮಾರು 50 ಕೈಮಗ್ಗ ಸೊಸೈಟಿಗಳು ಇವೆ. 25 ವಿದ್ಯುತ್ ಚಾಲಿತ ಕೈಮಗ್ಗ ಘಟಕಗಳು ಇವೆ. ಕೈಮಗ್ಗ ಸೊಸೈಟಿಯಲ್ಲಿ 5760 ನೇಕಾರರು ಹಾಗೂ ವಿದ್ಯುತ್ ಚಾಲಿತ ಕೈಮಗ್ಗ ಘಟಕದಲ್ಲಿ 110 ಜನರುಕೆಲಸನಿರ್ವಹಿಸುತ್ತಿದ್ದಾರೆ.ಸುಮಾರು ರೂ.76 ಕೋಟಿ ಹಣ ಜವಳಿ ಕ್ಷೇತ್ರದಲ್ಲಿ ಹೂಡಿಕೆ ಆಗಿದೆ. ಸಣ್ಣ ಮತ್ತು ಅತಿಸಣ್ಣ ಕೈಗಾರಿಕೆಗಳಿಗೆ ಜವಳಿ ಇಲಾಖೆಯಿಂದ ಉತ್ತೇಜನ ನೀಡಲಾಗುತ್ತಿದ್ದು, ಎಸ್.ಸಿ. ಹಾಗೂ ಎಸ್.ಟಿ ವರ್ಗದವರಿಗೆ ಶೇ.75 ರಷ್ಟು ಸಾಮಾನ್ಯ ವರ್ಗದವರಿಗೆ ಶೇ.50 ರಷ್ಟು ಸಹಾಯಧನ ನೀಡಲಾಗುತ್ತಿದೆ. ಹಿರಿಯೂರು ಬಳಿ ರೂ.27 ಕೋಟಿ ವೆಚ್ಚದಲ್ಲಿ ಬೈನರಿ ಅಪೆರಲ್ ಪಾರ್ಕ್ ಸ್ಥಾಪನೆಯಾಗಿದ್ದು, 3 ಘಟಗಳು ಕಾರ್ಯನಿರ್ವಹಿಸುತ್ತಿದ್ದು, 4600 ಜನರಿಗೆ ಉದ್ಯೋಗ ಮಾಡುತ್ತಿದ್ದಾರೆ. 2008–2013 ವರೆಗೆ ರಾಜ್ಯ ಸರ್ಕಾರ ಸುವರ್ಣ ವಸ್ತ್ರ ನೀತಿ, 2013 ರಿಂದ 20218 ರ ವರೆಗೆ ನೂತನ ಜವಳಿ ನೀತಿ, 2019 ರಿಂದ 2024ರ ವರೆಗೆ ಸಿದ್ದ ಉಡುಪು ನೀತಿ ಅನುಷ್ಠಾನ ನೀತಿಗಳನ್ನು ಜಾರಿಗೊಳಿಸಿದೆ. ಇದರ ಅಡಿ ಘಟಕ ಸ್ಥಾಪನೆಗೆ ಸಹಾಯಧನ, 5 ವರ್ಷದ ವರೆಗೆ ಉಚಿತ ವಿದ್ಯುತ್, ಪಿ.ಎಫ್. ಪಾವತಿ ಸೌಲಭ್ಯಗಳನ್ನು ನೀಡಲಾಗುತ್ತಿದೆ ಎಂದರು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಕೆ.ಎಸ್.ಎಫ್.ಸಿ ಪ್ರಧಾನ ವ್ಯವಸ್ಥಾಪಕ ಕೆ.ಮಲ್ಲಿಕಾರ್ಜುನ, ಉದ್ದಿಮೆದಾರರು ಹಾಗೂ ನವ ಉದ್ದಿಮೆದಾರರು ಸರ್ಕಾರದ ವತಿಯಿಂದ ನೀಡಲಾಗುವ ಸೌಲಭ್ಯಗಳನ್ನು ಪಡೆದುಕೊಂಡು ಯಶಸ್ವಿಯಾಗಬೇಕು. ಕೆ.ಎಸ್.ಎಫ್.ಸಿ ಕಚೇರಿಯಲ್ಲಿ ಯಾವುದೇ ಮದ್ಯಸ್ಥಿಕೆದಾರರ ನೆರವು ಇಲ್ಲದೆ ನೇರವಾಗಿ ಶಾಖಾ ವ್ಯಸ್ಥಾಪಕರನ್ನು ಕಂಡು ತಮ್ಮ ಕೆಲಸಗಳನ್ನು ಪೂರ್ಣಗೊಳಿಸಿಕೊಳ್ಳಿ. ಚಿತ್ರದುರ್ಗ ಶಾಖೆಯ ಬಗ್ಗೆ ಯಾವುದಾದರೂ ದೂರಗಳು ಇದ್ದರೆ, ಕೇಂದ್ರ ಕಚೇರಿಯ ಗಮನಕ್ಕೆ ತನ್ನಿ.

ಪುಟ ↘ 2

# ಮೈತ್ರಿಗೆ ರಾಜ್ಯದ ರೈತರ ಹಿತ ಬಲಿ: ರವಿ

» ಬೆಂಗಳೂರು



ರಾಜ್ಯದ ಕಾಂಗ್ರೆಸ್ ಸರ್ಕಾರ ವಿಪಕ್ಷಗಳ ಮೈತ್ರಿಕೂಟ ಇಂಡಿಯಾಗಾಗಿ ರಾಜ್ಯದ ಹಿತವನ್ನು ಬಲಿಕೊಟ್ಟು ಕಾವೇರಿ ನೀರನ್ನು ತಮಿಳುನಾಡಿಗೆ ಹರಿಸಿದೆ. ತಮಿಳುನಾಡು ಮುಖ್ಯಮಂತ್ರಿ ಸ್ಟಾಲಿನ್ ಸ್ನೇಹಕ್ಕಾಗಿ ರಾಜ್ಯದ ರೈತರ ಹಿತವನ್ನು ಬಲಿಕೊಡಲಾಗಿದೆ ಎಂದು ಮಾಜಿ ಸಚಿವ ಸಿ.ಟಿ ರವಿ ಹೇಳಿದರು. ಮಂಡ್ಯದಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಾಂಗ್ರೆಸ್ ಪಕ್ಷ ತನ್ನ ಲಾಭಕ್ಕಾಗಿ ರಾಜ್ಯದ ಜನತೆಗೆ ದ್ರೋಹಮಾಡಿದೆ ಎಂದು ಟೀಕಿಸಿದರು.ಕಾವೇರಿ ವಿವಾದಕ್ಕೆ ಶತಮಾನದ ಇತಿಹಾಸವಿದೆ. ವಿಧಾನಸಭಾ ಚುನಾವಣೆಗೂ ಮುನ್ನಕಾಂಗ್ರೆಸ್ ನಾಯಕರು ನಮ್ಮ ನೀರು ನಮ್ಮ ಹಕ್ಕು ಎಂದು ಪಾದಯಾತ್ರೆ ಮಾಡಿದ್ದರು.

ಸಂಕಷ್ಟ ಸೂತ್ರವನ್ನು ಬದಿಗೊತ್ತಿ ತಮಿಳುನಾಡಿಗೆನೀರು ಹರಿಸಲಾಗಿದೆ. ರೈತರು ಎಂದರೆ ಎಲ್ಲರೂ ಒಂದೇ, ಆದರೆ ಸಂಕಷ್ಟ ಇದ್ದಾಗ ಅದರ ಸೂತ್ರಕ್ಕನುಗುಣವಾಗಿನೀರು ಹರಿಸಬೇಕಿತ್ತು. ಅದು ಬಿಟ್ಟು ಮೈತ್ರಿಗೋಸ್ಕರ ನೀರನ್ನು ಹರಿಸಿರುವುದು ಸರಿಯಲ್ಲ ಎಂದರು. ತಮಿಳುನಾಡಿಗೆ ನೀರು ಬಿಟ್ಟು ಸರ್ವಪಕ್ಷ ಸಭೆ ಮಾಡಿದರೆ ಏನು ಪ್ರಯೋಜನ, ನೀರು ಬಿಡುವ ಮೊದಲೇ ಸರ್ವಪಕ್ಷ ಸಭೆ ನಡೆಸಬೇಕಿತ್ತು. ಕಾಂಗ್ರೆಸ್ ಸರ್ಕಾರ ರಾಜ್ಯದ ಜನತೆಗೆ ಅನ್ಯಾಯ ಮಾಡಿದೆ ಎಂದು ಸಿ.ಟಿ ರವಿಹೇಳಿದರು.ಕಾಂಗ್ರೆಸ್ ಸರ್ಕಾರ ಬಂದಮೇಲೆ ರಾಜ್ಯ ಕತ್ತಲೆಯಲ್ಲಿ ಮುಳುಗಿದೆ. ಮುಂದಿನ ದಿನಗಳಲ್ಲಿ ರಾಜ್ಯದಲ್ಲಿ ವಿದ್ಯುತ್ ಕೊರತೆಯಾಗುವ ಸಾಧ್ಯತೆ ಇದೆ ಎಂದು ಸಿ.ಟಿ. ರವಿ ಹೇಳಿದರು.

# ಗ್ರಾ.ಪಂ.ಗಳಲ್ಲಿ ತಿಂಗಳಿಗೆ ಒಮ್ಮೆ ನೀರು ನೈರ್ಮಲ್ಯ ಸಮಿತಿ ಸಭೆ ನಡೆಸಿ

» ಚಿತ್ರದುರ್ಗ

ಶುದ್ಧವಾದ ಕುಡಿಯುವ ನೀರನ್ನು ಪೂರೈಸುವುದರಿಂದ ಹಲವಾರು ಸಾಂಕ್ರಾಮಿಕ ರೋಗಗಳನ್ನು ತಡೆಗಟ್ಟಬಹುದು. ಗ್ರಾಮ ಪಂಚಾಯಿತಿಗಳಲ್ಲಿ ತಿಂಗಳಿಗೆ ಒಮ್ಮೆಯಾದರೂ ಸಭೆ ನಡೆಸಿ ಪರಿಸರ ಸ್ವಚ್ಛತೆ ಮತ್ತು ನೀರು ನೈರ್ಮಲ್ಯದ ಬಗ್ಗೆ ಸಭೆಯಲ್ಲಿ ಚರ್ಚಿಸಬೇಕು ಎಂದು ತಾಲೂಕ ಆರೋಗ್ಯ ಅಧಿಕಾರಿ ಡಾ. ಬಿ.ವಿ.ಗಿರೀಶ್ ಹೇಳಿದರು.

ಮಂಗಳವಾರ ಸಿರಿಗೆರೆ ಗ್ರಾಮ ಪಂಚಾಯತಿ ಸಭಾಂಗಣದಲ್ಲಿ ಆಯೋಜಿಸಲಾಗಿದ್ದ ಸಭೆ ಉದ್ದೇಶಿ ಅವರು ಮಾತನಾಡಿದರು.

ಸ್ವಚ್ಛ ನೀರು ಆರೋಗ್ಯವನ್ನು ಕಾಪಾಡುತ್ತದೆ. ಸಭೆಯಲ್ಲಿ ಸದ್ಯರು ಹಾಗೂ ಗ್ರಾಮಸ್ಥರು ಪಾಲ್ಗೊಂಡು ತಮ್ಮ ತಮ್ಮ ವಾರ್ಡ್ಗಳಲ್ಲಿ ಇರುವ ಸಮಸ್ಯೆಗಳ ಬಗ್ಗೆ ಕ್ರಿಯಾಯೋಜನೆ ರೂಪಿಸಬೇಕು.

ಪುಟ ↘ 2

## ಪ್ರಮುಖ ಸುದ್ದಿ

# ಚಂದ್ರನ ಕಡೆ ಭಾರತದ ಹೆಜ್ಜೆ, ಜಗತ್ತಿನ ಕಣ್ಣು ಭಾರತದತ್ತ

» ಬೆಂಗಳೂರು

ಚಂದ್ರಯಾನ–3ರ ಲ್ಯಾಂಡರ್ ಮಾಡ್ಯೂಲ್ ಬುಧವಾರ ಸಂಜೆ ಸುಮಾರು 6:04ರ ವೇಳೆಗೆ ಚಂದ್ರನ ಮೇಲ್ಭಾಗಕ್ಕೆ ಸ್ಪರ್ಶಿಸಲಿದ್ದು, ಜಾಗತಿಕ ಮಟ್ಟದಲ್ಲಿ ಕೌತುಕಕ್ಕೆ ಕಾರಣವಾಗಿದೆ. ಒಂದು ವೇಳೆ ಸಾಫ್ಟ್ ಲ್ಯಾಂಡಿಂಗ್ ಆದರೆ ಚಂದ್ರನ ಮೇಲ್ಭಾಗಕ್ಕೆ ಸ್ಪರ್ಶಿಸಿದ ಜಗತ್ತಿನ 4ನೇ ರಾಷ್ಟ್ರವಾಗಿ ಭಾರತ ಹೊರಹೊಮ್ಮಲಿದೆ. ನಿನ್ನೆ ಈಗಾಗಲೇ ಚಂದ್ರನ ಚಿತ್ರಗಳನ್ನು ಗಗನನೌಕೆ ಸೆರೆಹಿಡಿದು ಭೂಮಿಗೆ ರವಾನಿಸಿದೆ. ಸದ್ಯ ಸಾಫ್ಟ್ ಲ್ಯಾಂಡಿಂಗ್ ಇನ್ನೇನು ಕ್ಷಣಗಣನೆ ಆರಂಭವಾಗಿದ್ದು, ಈ ನಡುವೆ ಯಾವುದೇ ಅಂಶಗಳು ಪ್ರತಿಕೂಲವೆಂದು ತೋರಿದರೆ ಮಾಡ್ಯೂಲ್‌ನ ಲ್ಯಾಂಡಿಂಗ್ ಅನ್ನು ಆಗಸ್ಟ್ 27 ಕ್ಕೆ ಮುಂದೂಡಲಾಗುವ ಸಾಧ್ಯತೆ ಇದೆ ಎನ್ನಲಾಗಿದೆ.



ಇನ್ನು ಚಂದ್ರನ ಮೇಲ್ಭಾಗ ತಲುಪಿದ ಬಳಿಕ ಲ್ಯಾಂಡರ್ ಹಾಗೂ ರೋವರ್ ಏನು ಮಾಡಲಿದೆ ಎಂಬ ಬಗ್ಗೆ ಕುತೂಹಲ ಸಾಮಾನ್ಯ ಜನರಲ್ಲಿ ಮನೆ ಮಾಡಿದೆ. ಇದಕ್ಕೂ ಮುನ್ನ ನಾಳೆ ಸಾಫ್ಟ್ ಲ್ಯಾಂಡಿಂಗ್ ಮಾಡಲು ಪ್ರತಿಕೂಲ ವಾತಾವರಣ ಲಭಿಸದೇ ಹೋದರೆ ಆಗಸ್ಟ್ 27ಕ್ಕೆ ಯೋಜನೆ ಮುಂದೂಡಲಾಗುವ ಸಾಧ್ಯತೆ ಕೂಡ ಇದೆ ಎಂದು ಇಸ್ರೋ ವಿಜ್ಞಾನಿಯೊಬ್ಬರು ತಿಳಿಸಿರುವುದು ಕುತೂಹಲಕ್ಕೆ ಕಾರಣವಾಗಿದೆ. ಚಂದ್ರನ ದಕ್ಷಿಣ ಧ್ರುವ ಪ್ರದೇಶವನ್ನು ಗುರಿಯಾಗಿರಿಸಿಕೊಂಡು ಇಸ್ರೋದ ಚಂದ್ರಯಾನ–3 ಯೋಜನೆ ನಡೆಸಿದೆ. ಜಗತ್ತಿನಲ್ಲೇ ಈತನಕ ದಕ್ಷಿಣ ಧ್ರುವ ಪ್ರದೇಶಕ್ಕೆ ಯಾವುದೇ ರಾಷ್ಟ್ರಗಳು ತಲುಪಲು ಸಾಧ್ಯವಾಗಿಲ್ಲ. ಹಾಗಾಗಿ ಕೌತುಕವಾಗಿಯೇ ಉಳಿದಿರುವ ಇಲ್ಲಿನ ಪ್ರದೇಶದಲ್ಲಿ ಚಂದ್ರಯಾನ–3 ಲ್ಯಾಂಡರ್ ಮಂಜುಗಡ್ಡೆ ಅಥವಾ ಹೆಪ್ಪುಗಟ್ಟಿದ ಸ್ಥಿತಿಯಲ್ಲಿರುವ ನೀರಿನ ಪ್ರದೇಶ ಹೊಂದಿರುವ ಬಗ್ಗೆ ಹೆಚ್ಚಿನ ಅಧ್ಯಯನ ನಡೆಸಲಿದೆ. ಇದು ಭವಿಷ್ಯದ ಚಂದ್ರನ ಕಾರ್ಯಾಚರಣೆಗಳಿಗೆ ಆಮ್ಲಜನಕ, ಇಂಧನ ಮತ್ತು ನೀರಿನ ಮೂಲವಾಗಿರಬಹುದು ಅಥವಾ ಹೆಚ್ಚು ಶಾಶ್ವತ ಚಂದ್ರನ ವಸಾಹತು ಆಗಿರಬಹುದು ಎನ್ನಲಾಗಿದೆ. ಇನ್ನು ರೋವರ್ ಚಂದ್ರನ ನೆಲಕ್ಕೆಕಾಲಿರಿಸಿದಬಳಿಕಇಸ್ರೋವಿಜ್ಞಾನಿಗಳ ನಿಜವಾದ ಕಾರ್ಯ ಆರಂಭವಾಗುತ್ತದೆ. ಚಂದ್ರನ ಮೇಲೆ ಒಂದು ಲೂನಾರ್ ಡೇ ಅಂದರೆ ಭೂಮಿಯ 14 ದಿನಗಳ ಕಾಲ ರೋವರ್ ಇಲ್ಲಿ ಕಾರ್ಯಾಚರಣೆ ಅಧ್ಯಯನ ನಡೆಸಿ, ಬೆಂಗಳೂರಿನಲ್ಲಿರುವ ಕಮಾಂಡ್ ಸೆಂಟರ್‌ಗೆ ಮಾಹಿತಿ ರವಾನಿಸಲಿದೆ. ಹಾಗಾಗಿ ಲ್ಯಾಂಡಿಂಗ್ ಮತ್ತು ರೋವರ್‌ನಲ್ಲಿರುವ ಐದು ವೈಜ್ಞಾನಿಕ ಉಪಕರಣಗಳಿಂದ ಬರುವ ಟನ್‌ಗಳಷ್ಟು ಡೇಟಾವನ್ನು ವಿಜ್ಞಾನಿಗಳು ವಿಶ್ಲೇಷಿಸಬೇಕಾಗುತ್ತದೆ. ಚಂದ್ರನ ಮೇಲ್ಮೈಯ ಖನಿಜ ಸಂಯೋಜನೆಯ ಸ್ಪೆಕ್ಟ್ರೋಮೀಟರ್ ವಿಶ್ಲೇಷಣೆ ಸೇರಿದಂತೆ ಸರಣಿ ಪ್ರಯೋಗಗಳು ನಡೆಯಲಿದೆ. ಚಂದ್ರನ ಮೇಲ್ಭಾಗಕ್ಕೆ ತಲುಪಿದ ಬಳಿಕ ಸ್ವಲ್ಪ ಸಮಯದ ನಂತರ ವಿಕ್ರಮ್ ಲ್ಯಾಂಡರ್‌ನ ಒಂದು ಬದಿಯ ಫಲಕವು ತೆರೆದುಕೊಳ್ಳುತ್ತದೆ. ಇದು ಪ್ರಗ್ಯಾನ್ ರೋವರ್‌ಗಾಗಿ ರಾಂಪ್ ಅನ್ನು ರಚಿಸುತ್ತದೆ. ರಾಷ್ಟ್ರಧ್ವಜ ಮತ್ತು ಇಸ್ರೋ ಲಾಂಛನವನ್ನು ಹೊಂದಿರುವ ಆರು ಚಕ್ರಗಳ ಪ್ರಗ್ಯಾನ್ ನಾಲ್ಕು ಗಂಟೆಗಳ ನಂತರ ಚಂದ್ರನ ಮೇಲ್ಮೈಯಲ್ಲಿ ಇಳಿದು ಸೆಕೆಂಡಿಗೆ 1 ಸೆಂ.ಮೀ ವೇಗದಲ್ಲಿ ಚಲಿಸಲಿದೆ.

## ಫಾಸ್ಟ್ ನ್ಯೂಸ್

### ಹಿರಿಯೂರು ಮೇಟಿಕುರ್ಕೆ ಬಳಿ 1194 ಎಕರೆ ಕೈಗಾರಿಕಾ ಪ್ರದೇಶ ಅಭಿವೃದ್ಧಿ

» ಮೊದಲ ಪುಟದಿಂದ

ಕರ್ನಾಟಕ ಹಣಕಾಸು ಸಂಸ್ಥೆ ಜನ ಸ್ನೇಹಿಯಾಗಿದ್ದು, ಸರ್ಕಾರ ಎಲ್ಲಾ ಯೋಜನೆಗಳ ಲಾಭವನ್ನು ಜನರಿಗೆ ತಲುಪಿಸುತ್ತಿದೆ. ರಾಷ್ಟ್ರೀಯ ಬ್ಯಾಂಕುಗಳಿಗಿಂತಲೂ ಹೆಚ್ಚಿನ ರೀತಿಯಲ್ಲಿ ಉದ್ದಿಮೆದಾರರಿಗೆ ಉಪಯೋಗವಾಗಿದೆ ಎಂದರು. ಇದೇ ಸಂದರ್ಭದಲ್ಲಿ ಉದ್ದಿಮೆದಾರರ ಸಮಸ್ಯೆಗಳ ಕುರಿತು ಸಂವಾದ ನಡೆಸಲಾಯಿತು. ಉದ್ದಿಮೆದಾರರ ಸಮಾವೇಶದಲ್ಲಿ ಕರ್ನಾಟಕ ರಾಜ್ಯ ಹಣಕಾಸು ಸಂಸ್ಥೆ ಚಿತ್ರದುರ್ಗ ಶಾಖಾ ವ್ಯವಸ್ಥಾಪಕ ಆರ್.ಬಾಬು, ಶಿವಮೊಗ್ಗ ಶಾಖಾ ವ್ಯವಸ್ಥಾಪಕ ಕೆ.ಎನ್.ಲಿಂಗಪ್ಪ, ಕರ್ನಾಟಕ ರಾಜ್ಯ ಹಣಕಾಸು ಸಂಸ್ಥೆ ಚಿತ್ರದುರ್ಗ ಶಾಖಾ ಉಪ ವ್ಯವಸ್ಥಾಪಕ ಸತ್ಯನಾರಾಯಣ ಹಾಗೂ ಸಿಬ್ಬಂದಿ ವರ್ಗದವರು, ಉದ್ದಿಮೆದಾರರು ಇದ್ದರು.

### ಹೊಯ್ಸಳ ಮತ್ತು ಕೆಳದಿ ಚೆನ್ನಮ್ಮ ಶೌರ್ಯ ಪ್ರಶಸ್ತಿ

» ದಾವಣಗೆರೆ

ಹೊಯ್ಸಳ ಮತ್ತು ಕೆಳದಿ ಚೆನ್ನಮ್ಮ ಶೌರ್ಯ ಪ್ರಶಸ್ತಿ ಹಾಗೂ ಮಕ್ಕಳ ಕಲ್ಯಾಣ ಕ್ಷೇತ್ರದಲ್ಲಿ ಸೇವೆ ಸಲ್ಲಿಸಿದ ವ್ಯಕ್ತಿ ಮತ್ತು ಸಂಸ್ಥೆಗಳಿಂದ ರಾಜ್ಯ ಪ್ರಶಸ್ತಿಗಾಗಿ ಅರ್ಜಿ ಆಹ್ವಾನಿಸಲಾಗಿದೆ.ಅರ್ಜಿ ಸಲ್ಲಿಸುವ ಮಕ್ಕಳು 2005 ಆಗಸ್ಟ್ 1 ರ ನಂತರ ಜನಿಸಿದ್ದು, ತಮ್ಮ ಪ್ರಾಣದ ಹಂಗನ್ನು ತೊರೆದು ಹಾಗೂ ಸಮಯ ಪ್ರಜ್ಞೆಯಿಂದ ಇತರರ ಪ್ರಾಣ ರಕ್ಷಣೆಗಾಗಿ ಧೈರ್ಯ ಸಾಹಸ ಪ್ರದರ್ಶಿಸಿದ 6 ರಿಂದ 8 ವರ್ಷದೊಳಗಿನ ಬಾಲಕರಿಗೆ ಹೊಯ್ಸಳ ಪ್ರಶಸ್ತಿ ಮತ್ತು ಬಾಲಕಿಯರಿಗೆ ಕೆಳದಿ ಚೆನ್ನಮ್ಮ ಶೌರ್ಯ ಪ್ರಶಸ್ತಿಯನ್ನು ಪ್ರದಾನ ಮಾಡಲಾಗುತ್ತಿದ್ದು, ಪ್ರಕರಣವು 2022ರ ಆಗಸ್ಟ್ 1 ರಿಂದ 2023 ರ ಜುಲೈ 31 ರೊಳಗೆ ನಡೆದಿರಬೇಕು. ಆಯ್ಕೆಯಾದ ಮಕ್ಕಳಿಗೆ ರೂ 10,000 ನಗದು ಬಹುಮಾನ ಮತ್ತು ಪ್ರಶಸ್ತಿ ಪತ್ರ ನೀಡಲಾಗುತ್ತದೆ. ಮಕ್ಕಳ ಕಲ್ಯಾಣ ಕ್ಷೇತ್ರದಲ್ಲಿ ಕನಿಷ್ಠ 5 ವರ್ಷಗಳ ಕಾಲ ಅತ್ಯುತ್ತಮ ಸೇವೆ ಸಲ್ಲಿಸಿರುವ ವ್ಯಕ್ತಿಗಳಿಗೆ ತಲಾ ರೂ. 25,000 ಹಾಗೂ ಸಂಸ್ಥೆಗಳಿಗೆ ತಲಾ ರೂ 1,00,000 ಗಳನ್ನು ಪ್ರಶಸ್ತಿ ಪತ್ರದೊಂದಿಗೆ ನೀಡಲಾಗುತ್ತದೆ.ಆಸಕ್ತರು ಸೆಪ್ಟೆಂಬರ್ 8 ರೊಳಗಾಗಿ ನಗರದ ಎಂ.ಸಿ.ಸಿ ಬಿ ಬ್ಲಾಕ್ ನ 14ನೇ ಮುಖ್ಯರಸ್ತೆಯಲ್ಲಿರುವ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪ ನಿರ್ದೇಶಕರ ಕಚೇರಿಯಲ್ಲಿ ಅರ್ಜಿ ನಮೂನೆಗಳನ್ನು ಪಡೆದು ಅಗತ್ಯ ದಾಖಲೆಗಳೊಂದಿಗೆ ಸಲ್ಲಿಸಬೇಕು ಎಂದು ಉಪನಿರ್ದೇಶಕಿ ವಾಸಂತಿ ಉಪ್ಪಾರ್ ತಿಳಿಸಿದ್ದಾರೆ.

### ಆಸ್ತಿ ದರ ಪರಿಷ್ಕರಣೆ

» ದಾವಣಗೆರೆ

ದಾವಣಗೆರೆ ತಾಲ್ಲೂಕಿನ ವ್ಯಾಪ್ತಿಯಲ್ಲಿ ಬರುವ ದಾವಣಗೆರೆ ಮಹಾನಗರ ಪಾಲಿಕೆ ಹಾಗೂ ಗ್ರಾಮಗಳ ಕೃಷಿ ಜಮೀನು ಮತ್ತು ವಸತಿ ನಿವೇಶನಗಳ ಆಸ್ತಿ ದರಗಳ ಮಾರ್ಗಸೂಚಿ ಪ್ರಸಕ್ತ ಸಾಲಿಗೆ ದರಗಳನ್ನು ಪರಿಷ್ಕರಣೆಗೊಳಿಸಲಾಗಿದೆ. ವರದಿ ಪ್ರಕಟಣೆಗೊಂಡ ದಿನಾಂಕದಿಂದ 15 ದಿವಸಗಳ ಒಳಗಾಗಿ ಸಾರ್ವಜನಿಕರಿಂದ ಆಕ್ಷೇಪಣೆ, ಸಲಹೆ, ಸೂಚನೆಗಳು ದಾಖಲಾತಿಗಳ ಆಧಾರದ ಮೇಲೆ ಸಕಾರಣದೊಂದಿಗೆ ತಮ್ಮ ಅಹಾವಲುಗಳನ್ನು ಲಿಖಿತ ರೂಪದಲ್ಲಿ ಸದಸ್ಯ ಕಾರ್ಯದರ್ಶಿಗಳು, ಮಾರ್ಗಸೂಚಿ ಮೌಲ್ಯ ಮಾಪನ ಉಪ ಸಮಿತಿ ಹಾಗೂ ಉಪನೋಂದಣಾಧಿಕಾರಿ, ಉಪನೋಂದಣಿ ಕಛೇರಿ ಏಕಾ ಟವರ್ , ಪಿ.ಬಿ ರಸ್ತೆ ದಾವಣಗೆರೆ ಸಲ್ಲಿಸಲು ಕೋರಲಾಗಿದೆ.

### ಕಾಂಗ್ರೆಸ್‌ಗೆ ಯಾರೇ ಬಂದರೂ ಸ್ವಾಗತ ಮಹದೇವಪ್ಪ

ಕಾಂಗ್ರೆಸ್‌ಗೆ ಯಾರು ಬೇಕಾದರೂ ಬರಬಹುದು ಎಂದು ಮೈಸೂರಿನಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಸಿ.ಮಹದೇವಪ್ಪ ಹೇಳಿದರು. ನಾವು ಮನೆ ಮನೆಗೆ ಹೋಗಿ ನೀವು ಬನ್ನಿ ಬನ್ನಿ ಅಂತಾ ಕರೆಯುತ್ತಿಲ್ಲ. ನಮ್ಮ ಪಕ್ಷದ ಬಾಗಿಲು ತೆರೆದಿದೆ. ಸರ್ಕಾರದ ಯೋಜನೆ ನೋಡಿ ಯಾರು ಬೇಕಾದರೂ ಬರಬಹುದು. ಮೈಸೂರು ನಾಲ್ವಡಿ ಕೃಷ್ಣರಾಜ ಒಡೆಯರ್ ಆಡಳಿತ ನಡೆಸಿದ ನಗರ. ಮೈಸೂರಿನಲ್ಲಿ ಯಾವುದೇ ಮುಖಂಡರು ಪಕ್ಷಕ್ಕೆ ಬಂದರೇ ಸ್ವಾಗತ. ಕಾಂಗ್ರೆಸ್ ಪ್ರಜಾಪ್ರಭುತ್ವದಲ್ಲಿ ನಂಬಿಕೆ ಇಟ್ಟಿದೆ. ಕಾಂಗ್ರೆಸ್ ಪಕ್ಷದ ಸಿದ್ಧಾಂತ ಒಪ್ಪಿ ಯಾರೇ ಬಂದರೂ ಸ್ವಾಗತ ಎಂದರು.

### ನೇಣು ಹಾಕಿಕೊಂಡು ಕಾಲೇಜು ಪ್ರಿನ್ಸಿಪಾಲ್ ಆತ್ಮಹತ್ಯೆ

ಬಾಗಲಕೋಟೆ ಜಿಲ್ಲೆ ಹುನಗುಂದ ಪಟ್ಟಣದ ಸರಕಾರಿ ಪದವಿ ಕಾಲೇಜಿನಲ್ಲಿ ನೇಣು ಹಾಕಿಕೊಂಡು ಕಾಲೇಜು ಪ್ರಿನ್ಸಿಪಾಲ್ ಆತ್ಮಹತ್ಯೆ ಮಾಡಿಕೊಂಡ ಘಟನೆ ನಡೆದಿದೆ. ನಾಗರಾಜ ಮುದಗಲ್(56) ಆತ್ಮಹತ್ಯೆ ಮಾಡಿಕೊಂಡ ಪ್ರಿನ್ಸಿಪಾಲ್. ಇಂದು "ಜಾನಪದ ಜಾತ್ರೆ ಹೊನ್ನ ಸಂಭ್ರಮ ಎಂಬ ಕಾರ್ಯಕ್ರಮ ಇತ್ತು. ನಿನ್ನೆ ವಿವಿಧ ಕಡೆ ತೆರಳಿ ಆಮಂತ್ರಣ ಕೊಟ್ಟು ಬಂದಿದ್ದ ಪ್ರಿನ್ಸಿಪಾಲ್ ಇಂದು ಬೆಳಿಗ್ಗೆ ನೇಣು ಹಾಕಿಕೊಂಡ ಸ್ಥಿತಿಯಲ್ಲಿ ಶವವಾಗಿ ಪತ್ತೆಯಾಗಿದ್ದಾರೆ.

# ವಿದ್ಯಾರ್ಥಿಗಳು ಯಾವುದೇ ರೋಗಕ್ಕೆ ತುತ್ತಾಗದಂತೆ ಲಸಿಕೆ ನೀಡುವ ಮೂಲಕ ಜಾಗೃತಿ: ಬಿಇಓ ಸುರೇಶ್

» ಚಳ್ಳಕೆರೆ

ಗ್ರಾಮೀಣ ಭಾಗದ ಶಾಲೆಗಳಲ್ಲಿ ವಿದ್ಯಾರ್ಥಿಗಳ ಶೈಕ್ಷಣಿಕ ಪ್ರಗತಿಯೊಂದಿಗೆ ಆರೋಗ್ಯದ ಬಗ್ಗೆಯೂ ಸಹ ಹೆಚ್ಚು ಗಮನ ನೀಡಬೇಕಿದೆ. ಕೊರೋನಾ ವೈರಾಣು ಕಡಿಮೆಯಾಗಿದ್ದರೂ ಇತರೆ ರೋಗಗಳು ಮಕ್ಕಳನ್ನು ಆವರಿಸುವ ಆತಂಕವಿದೆ. ಈ ಹಿನ್ನೆಲೆಯಲ್ಲಿ ಇಲಾಖೆಯ ಸೂಚನೆ ಮೇರೆಗೆ ಡಿಪಿಟಿ, ಟಿಡಿ ಲಸಿಕೆಯನ್ನು ನೀಡುವಮೂಲಕವಿದ್ಯಾರ್ಥಿಗಳಆರೋಗ್ಯ ರಕ್ಷಣೆ ಮಾಡಲು ಶಿಕ್ಷಣ ಇಲಾಖೆ ಯಶಸ್ವಿ ಹೆಜ್ಜೆ ಇಟ್ಟಿದೆ ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ಕೆ.ಎಸ್.ಸುರೇಶ್ ತಿಳಿಸಿದರು. ಅವರು, ಮಂಗಳವಾರ ತಾಲ್ಲೂಕಿನ ಕಾಪರಹಳ್ಳಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಒಂದನೇ ತರಗತಿ ವಿದ್ಯಾರ್ಥಿಗಳಿಗೆ ಡಿಪಿಟಿ ಲಸಿಕೆ, ನಾಲ್ಕನೇ ತರಗತಿ ವಿದ್ಯಾರ್ಥಿಗಳಿಗೆ ಟಿಡಿ ಲಸಿಕೆ ಹಾಕುವ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು. ಈಗಾಗಲೇ ತಾಲ್ಲೂಕಿನಾದ್ಯಂತ ಸುಮಾರು 400ಕ್ಕೂ ಹೆಚ್ಚು ಪ್ರಾಥಮಿಕ



ಶಾಲೆಗಳಲ್ಲಿ ಲಸಿಕಾ ಕಾರ್ಯಕ್ರಮ ಆರಂಭಿಸಿದ್ದು, ಪ್ರತಿಯೊಬ್ಬ ವಿದ್ಯಾರ್ಥಿಗಳು ಲಸಿಕೆಯಿಂದ ವಂಚಿತರಾಗದಂತೆ ಶಿಕ್ಷಕರು ಗಮನಹರಿಸುವಂತೆ ಸೂಚನೆ ನೀಡಲಾಗಿದೆ ಎಂದರು. ಮುಖ್ಯ ಶಿಕ್ಷಕಿ ವಿ.ರಂಗಮ್ಮ ಮಾತನಾಡಿ, ಪ್ರಸ್ತುತ ಶಾಲೆಯಲ್ಲಿ ದಾಖಲಾಗಿರುವ ಎಲ್ಲಾ ವಿದ್ಯಾರ್ಥಿಗಳಿಗೆ ಮಾಹಿತಿ ನೀಡಲಾಗಿದೆ. ಕೆಲ ವಿದ್ಯಾರ್ಥಿಗಳು ಅನಿವಾರ್ಯ ಕಾರಣಗಳಿಂದ ಶಾಲೆಗೆ ಆಗಮಿಸಿಲ್ಲ. ಅವರಿಗೂ ಸಹ ಪ್ರತ್ಯೇಕವಾಗಿ ಲಸಿಕೆಯನ್ನು ಹಾಕಲು ವ್ಯವಸ್ಥೆ ಮಾಡಲಾಗುವುದು. ವಿದ್ಯಾರ್ಥಿಗಳಿಗೆ ಎರಡೂ ಲಸಿಕೆ ನೀಡುವುದರಿಂದ ವಿದ್ಯಾರ್ಥಿಗಳ ಮೇಲೆ ಯಾವುದೇ ವ್ಯತಿರಿಕ್ತ ಪರಿಣಾಮವಾಗುವುದಿಲ್ಲ. ಈ ಲಸಿಕೆ ಕಾರ್ಯಕ್ರಮ ನಮ್ಮ ಶಾಲೆ ವ್ಯಾಪ್ತಿಯಲ್ಲಿ ಯಶಸ್ವಿಯತ್ತ ನಡೆದಿದೆ ಎಂದರು. ಶಿಕ್ಷಣ ಸಂಯೋಜಕ ರವಿಶಂಕರ್, ಆರೋಗ್ಯ ಇಲಾಖೆಯ ತಿಪ್ಪೇಸ್ವಾಮಿ, ಆರ್.ಎಸ್.ಕಾವ್ಯ, ಟಿ.ಮಲ್ಲಮ್ಮ, ಪಿ.ಉಮಾದೇವಿ ಮುಂತಾದವರು ಉಪಸ್ಥಿತರಿದ್ದರು.

## ಶಿಕ್ಷಕರು ತೋರಿದ ಹಾದಿಯಲ್ಲಿ ಜೀವನ ರೂಪಿಸಿಕೊಳ್ಳಬೇಕು: ಬಿ.ಜಿ.ಗೋವಿಂದಪ್ಪ

» ಹೊಸದುರ್ಗ

ಉನ್ನತ ವ್ಯಕ್ತಿಗಳಾಗಲು ಈ ರೀತಿ ವರ್ತನೆಯಿಂದ ಸಾಧ್ಯವಾಗುವುದಿಲ್ಲ. ಹಾಗಾಗಿ ವಿದ್ಯಾರ್ಥಿಗಳು ಸಂಸ್ಕಾರವಂತ ಶಿಕ್ಷಣವನ್ನು ಪಡೆದು ಜವಾಬ್ದಾರಿಯಿಂದ ನಡೆದುಕೊಂಡಲ್ಲಿ ಉತ್ತಮ ವ್ಯಕ್ತಿತ್ವ ಸಂಪಾದಿಸಲು ಸಾಧ್ಯ. ತಂದೆ ತಾಯಿ ಮತ್ತು ಶಿಕ್ಷಕರು ತೋರಿಸಿದ ಹಾದಿಯಲ್ಲಿ ಜೀವನ ರೂಪಿಸಿಕೊಳ್ಳಬೇಕು ಇವರ ಋಣ ತೀರಿಸುವ ಕೆಲಸವಾಗಬೇಕು ಎಂದು ಶಾಸಕ ಬಿ.ಜಿ.ಗೋವಿಂದಪ್ಪ ಕರೆ ನೀಡಿದರು.

ತಾಲೂಕು ಆಡಳಿತ, ತಾಲೂಕು ಪಂಚಾಯ್ತಿ, ಪುರಸಭೆ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ವತಿಯಿಂದ ಪಟ್ಟಣದ ರಾಧಾಕೃಷ್ಣ ಸಮುದಾಯ ಭವನದಲ್ಲಿ ಭಾನುವಾರ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ವಿಸ್ತರಣಾಧಿಕಾರಿ ಕೆ.ಸಿ.ಶಶಿಧರ್ ಅವರ ನೇತೃತ್ವದಲ್ಲಿ ನಡೆದ ಡಿ.ದೇವರಾಜು ಅರಸು ಅವರ 108ನೇ ಜನ್ಮದಿನದ ಸಮಾರಂಭದಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಹೊಸದುರ್ಗದಲ್ಲಿ ಕಳೆದ ಎರಡುವರೆ ತಿಂಗಳಿನಿಂದ ವಸತಿ ನಿಲಯಗಳನ್ನು ಪೊಲೀಸರು ಕಾಯುವಂತ ಸಂದರ್ಭ ಬಂದಿದೆ ಇದು ಸರಿಯಾದದ್ದಲ್ಲ ವಸತಿ ನಿಲಯದಲ್ಲಿರುವ ವಿದ್ಯಾರ್ಥಿಗಳನ್ನು ವಸತಿ ನಿಲಯ ಪಾಲಕರು ಕಾಯುವುದು ಸರಿಯಾದದ್ದು ಆದರೆ ವಿದ್ಯಾರ್ಥಿಗಳ ದುರ್ನಡತೆಯಿಂದ ಸಂಘರ್ಷ



ಉಂಟಾಗಿ ಪೊಲೀಸರು ಕಾಯುವಂತ ಸ್ಥಿತಿ ಹೊಂದಿರುವುದು ಸರಿಯಲ್ಲ ಕಿವಿಮಾತು ಹೇಳಿದರು.

ದೇವರಾಜುಅರಸು ಅವರು ಪರಿಶಿಷ್ಟ ಜಾತಿ ಪರಿಶಿಷ್ಟ ಪಂಗಡ ಹಾಗೂ ಹಿಂದುಳಿದ ವರ್ಗಗಳ ವಸತಿ ನಿಲಯಗಳು ಸ್ಥಾಪನೆಯಾಗಲು ಅವರು ನೀಡಿರುವಂತಹ ಕೊಡುಗೆ ಅಪಾರವಾಗಿದೆ ಈ ಹಿನ್ನೆಲೆಯಲ್ಲಿ ಅವರನ್ನು ಎಲ್ಲರೂ ಸ್ಮರಿಸುವುದು ಆದ್ಯ ಕರ್ತವ್ಯ ಎಂದು ಕರೆ ನೀಡಿದರು.

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ವಿಸ್ತರಣಾಧಿಕಾರಿ ಕೆ.ಸಿ.ಶಶಿಧರ್ ಮಾತನಾಡಿದರು. ಸರಕಾರಿ ಪ್ರೌಢಶಾಲೆ ಸಹಶಿಕ್ಷಕ ಶ್ರೀಧರ್ ಶೆಟ್ರು ವಿಶೇಷ ಉಪನ್ಯಾಸ ನೀಡಿದರು. ಕಾರ್ಯಕ್ರಮದಲ್ಲಿ ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಎಂ.ಲಕ್ಷ□□ಯ್ಯ,ವಕೀಲ ರವೀಚಿದ್ರ,ತಹಶಿಲ್ದಾರ್ ಪಟ್ಟರಾಜುಗೌಡ,ತಾಲೂಕು ಪಂಚಾಯಿತಿ ಇ.ಓಸುನೀಲ್‌ಕುಮಾರ್, ಬಿಇಓ ಸೈಯದ್‌ಮೋಸಿನ್

ಪುರಸಭಾ ಮುಖ್ಯಾಧಿಕಾರಿ ತಿಮ್ಮರಾಜು. ಜಿ.ವಿ. ಕಾಂಗ್ರೇಸ್ ಮಹಿಳಾ ಅಧ್ಯಕ್ಷೆ ದೀಪಿಕಾ,ಇಲ್ಕಲ್‌ಅಜ್ಜಪ್ಪ,ಪಶು ಸಂಗೋಪನಾ ಇಲಾಖೆಯ ಯಲ್ಲಪ್ಪ, ಅಗ್ರೋ ಹೆಚ್.ಶಿವಣ್ಣ, ತಾಲೂಕು ಪಂಚಾಯಿತಿ ಸೇರಿದಂತೆ ಮತ್ತಿತರರು ಭಾಗವಹಿಸಿದ್ದರು.

## ಸಂಗೀತಕ್ಕೆ ನೋವು ಮರೆಸುವ ಶಕ್ತಿ ಇದೆ: ಹೆಚ್.ಬಿಲ್ಲಪ್ಪ



» ಹೊಸದುರ್ಗ

ಸಂಗೀತ ಸರಸ್ವತಿಯನ್ನು ಒಲಿಸಿಕೊಳ್ಳುವುದು ಒಂದು ದೊಡ್ಡ ಸಾಧನೆ ಮಾಡಿದಂತೆ ಸಂಗೀತ ಕಲಿಯುವುದು ಅಷ್ಟೊಂದು ಸುಲಭದ ಮಾತಲ್ಲಾ ಸಂಗೀತ ಸಾಧಕರಿಗೆ ಮಾತ್ರ ಒಲಿಯುತ್ತದೆ, ಸಂಗೀತಕ್ಕೆ ಮನುಷ್ಯನ ಮನದ ನೋವು ಮರೆಸುವ ಶಕ್ತಿ ಇದೆ ಎಂದು ಉಚ್ಚ ನ್ಯಾಯಾಲಯದ ವಿಶ್ರಾಂತ ನ್ಯಾಯಾಧೀಶರಾದ ಹೆಚ್.ಬಿಲ್ಲಪ್ಪ ಅಭಿಪ್ರಾಯಿಸಿದರು. ಪಟ್ಟಣದ ಕನ್ನಡ ಸಾಹಿತ್ಯ ಪರಿಷತ್ತಿನಲ್ಲಿ ಶ್ರಾವಣ ಮಾಸದ ಅಂಗವಾಗಿ ಆಯೋಜಿಸಲಾಗಿದ್ದ ಶ್ರಾವಣ ಸಂಗೀತ ಹಾಗೂ ಗೀತಗಾಯನ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು. ಸಂಗೀತ ಕೆಲವರನ್ನ ಮಾತ್ರ ಕೈ ಬೀಸಿ ಕರೆಯುತ್ತದೆ ನಮ್ಮ ನಾಡಿನಲ್ಲಿ ಸಾಕಷ್ಟು ಪ್ರಖ್ಯಾತಿ ಪಡೆದ ಗಾಯಕರಿದ್ದಾರೆ ಅಷ್ಟೇ ಏಕೆ ಗ್ರಾಮೀಣ ಪ್ರದೇಶದಲ್ಲೂ ಸಹಾ ಸಂಗೀತ ಗಾಯನದಲ್ಲಿ ಅದ್ಭುತವಾದ ಪ್ರತಿಭೆಗಳಿಗೆ ಇಂತಹ ಸಂಗೀತವನ್ನ ಒಲಿಸಿಕೊಳ್ಳಬೇಕಾದರೆ ಸಾಕಷ್ಟು ಶ್ರಮ ಹಾಕಿ ಕಲಿಯಬೇಕು ಅದೊಂದು ತಪಸ್ಸು ಮಾಡಿದಂತೆ ತಿಳಿಸಿದಅವರು ಸಂಗೀತ ಎಲ್ಲರ ಮನಸ್ಸಿಗೂ ಆನಂದ ಉಲ್ಲಾಸ ನಿರಾಳ ನೀಡುವ ಮಾದ್ಯಮವಾಗಿದೆ ಎಂದರು. ನಶಿಸಿ ಹೋಗುತ್ತಿರುವ ಗ್ರಾಮೀಣ ಕಲೆಗಳನ್ನು ಪುನಶ್ಚೇತನ ಮಾಡುವ ಕೆಲಸವನ್ನ ಇಂತಹ ಸಂಘ ಸಂಸ್ಥೆಗಳು ಮಾಡಬೇಕು ಕೇವಲ ಪಟ್ಟಣ ಪ್ರದೇಶಗಳಲ್ಲಿ ಇಂತಹ ಕಾರ್ಯಕ್ರಮಗಳನ್ನು ಮಾಡಿದರೆ ಸಾರ್ಥಕವಾಗುವುದಿಲ್ಲ,ಬದಲಾಗಿ ಹೋಬಳಿ ಹಾಗೂ ಗ್ರಾಮ ಮಟ್ಟದಲ್ಲಿ ಇಂತಹ ಕಲೆಗಳ ಪ್ರದರ್ಶನವಾಗಬೇಕು ಎಂದು ಅಭಿಪ್ರಾಯಿಸಿದರು.

ಪರಿಷತ್ತಿನ ಅಧ್ಯಕ ಬಿ.ಪಿ.ಓಂಕಾರಪ್ಪ ಅಧ್ಯಕ್ಷತೆ ವಹಿಸಿದ್ದರು. ಮುಖ್ಯ ಅತಿಥಿಗಳಾಗಿ ಪರಿಷತ್ತಿನ ಮಾಜಿ ಅಧ್ಯಕ್ಷರುಗಳಾದ ಬಾ.ಮೈಲಾರಪ್ಪ, ಧನಂಜಯಮೆಂಗಸಂದ್ರ, ಮಾಜಿ ಕಾರ್ಯದರ್ಶಿ ನಾಗತಿಹಳ್ಳಿಮಂಜುನಾಥ್, ಗಾಯಕಿ ಜಾನಕಿರಾಘು ಭಾಗವಹಿಸಿದ್ದರು ನಂತರ ನಡೆದ ಗೀತಗಾಯನ ಕಾರ್ಯಕ್ರಮದಲ್ಲಿ ಗಾಯಕ ಬಸವರಾಜ್,ಸುಬ್ರಮಣ್ಯಶೆಟ್ಟು, ಶ್ರೀಮತಿಪರಮ್ಮ, ಕುಮಾರಿನಳಿನಾ, ಜಾನಕಿರಾಘು,,ನಾಗತಿಹಳ್ಳಿ ಮಂಜುನಾಥ್,ಕಲಾವಿದ ಚಂದ್ರು, ಓ.ಶೋಭ, ರಾಮಚಂದ್ರಪ್ಪ, ಕೈನಡು ಚಂದ್ರಪ್ಪ, ಪ್ರಸನ್ನ,ತಿಪ್ಪೇಸ್ವಾಮಿ, ಬೇಬಿ ಅರುಂಧತಿ ಇದ್ದರು.

## 24ಕ್ಕೆ ಜಿಲ್ಲಾ ವಕೀಲರ ಸಂಘಕ್ಕೆ ನ್ಯಾ.ನಾಗಮೋಹನ್ ದಾಸ್

» ದಾವಣಗೆರೆ

ಜಿಲ್ಲಾ ವಕೀಲರ ಸಂಘ, ದಾವಣಗೆರೆ. ಆರ್.ಎಲ್. ಕಾನೂನು ಮಹಾವಿದ್ಯಾಲಯ, ದಾವಣಗೆರೆ

ಇವರ ಸಂಯುಕ್ತಾಶ್ರಯದಲ್ಲಿ ಉಪನ್ಯಾಸ ಕಾರ್ಯಕ್ರಮವನ್ನು ಇದೇ 24ರ ಗುರುವಾರ ಮಧ್ಯಾಹ್ನ 2.30ಕ್ಕೆ ನಗರದ ದೇವರಾಜು ಅರಸು ಬಡಾವಣೆಯಲ್ಲಿ ಜಿಲ್ಲಾ ನ್ಯಾಯಾಲಯಗಳ ಸಂಕೀರ್ಣದಲ್ಲಿರುವ ವಕೀಲರ ಸಾಂಸ್ಕೃತಿಕ ಸಮುದಾಯ ಭವನದಲ್ಲಿ ಆಯೋಜಿಸಲಾಗಿದೆ.

ಕಾರ್ಯಕ್ರಮದ ಉದ್ಘಾಟನೆ ಹಾಗೂ ಉಪನ್ಯಾಸವನ್ನು ಕರ್ನಾಟಕ ಉಚ್ಚ



ನ್ಯಾಯಾಲಯದ ವಿಶ್ರಾಂತ ನ್ಯಾಯಾಮೂರ್ತಿಗಳಾದ ಹೆಚ್. ಎನ್. ನಾಗಮೋಹನ್ ದಾಸ್ ಮಾಡುವರು. ಉಪನ್ಯಾಸ ಮಾಲಿಕೆಗೆ ಚಾಲನೆ ನೀಡುವ ನಾಗಮೋಹನ್ ದಾಸ್ ಅವರು, ಯುವ ವಕೀಲರ ಮುಂದಿರುವ ಸವಾಲುಗಳು ಹಾಗೂ ಸಾಧ್ಯತೆಗಳು ಕುರಿತು ಉಪನ್ಯಾಸ ನೀಡುವರು.

ಮುಖ್ಯ ಅತಿಥಿಗಳಾಗಿ ದಾವಣಗೆರೆ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ರಾಜೇಶ್ವರಿ ಎನ್.ಹೆಗಡೆ, ಹೈಕೋರ್ಟ್ ನ್ಯಾಯವಾದಿ ಅನಂತ ನಾಯಕ್, ವಕೀಲರಾದ ಕೆ.ಹೆಚ್.ಪಾಟೀಲ್. ಆರ್. ಎಲ್.ಲಾ ಕಾಲೇಜಿನ ಪ್ರಾಚಾರ್ಯ ಡಾ.ಜಿ.ಎಸ್. ಯತೀಶ್ ಆಗಮಿಸುವರು. ದಾವಣಗೆರೆ ಜಿಲ್ಲಾ ವಕೀಲರ ಸಂಘದ ಅಧ್ಯಕ್ಷರಾದ ಎಲ್.ಎಚ್. ಅರುಣ್‌ಕುಮಾರ್ ಅಧ್ಯಕ್ಷತೆ ವಹಿಸುವರು ಎಂದು ವಕೀಲರ ಸಂಘದ ಕಾರ್ಯದರ್ಶಿ ಎಸ್.ಬಸವರಾಜ, ಉಪಾಧ್ಯಕ್ಷ ಜಿ.ಕೆ.ಬಸವರಾಜ್ ಗೋಪನಾಳು, ಸಹ ಕಾರ್ಯದರ್ಶಿ ಎ.ಎಸ್. ಮಂಜುನಾಥ್ ತಿಳಿಸಿದ್ದಾರೆ.

## ಪ್ರಮುಖ ಸುದ್ದಿ

### 72 ವಿದ್ಯಾರ್ಥಿನಿಯರಿಗೆ ರೂ.2.77 ಲಕ್ಷ ವಿತರಣೆ

# ಕೆನರಾ ವಿದ್ಯಾಜ್ಯೋತಿ: ವಿದ್ಯಾರ್ಥಿ ವೇತನ ವಿತರಣೆ

» ಚಿತ್ರದುರ್ಗ

ಕೆನರಾ ಬ್ಯಾಂಕ್‌ನ ಸಿಎಸ್‌ಆರ್ ಫಂಡ್‌ನ ಕೆನರಾ ವಿದ್ಯಾಜ್ಯೋತಿ ಯೋಜನೆಯಡಿ ಜಿಲ್ಲೆಯ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡದ 72 ವಿದ್ಯಾರ್ಥಿನಿಯರಿಗೆ ಒಟ್ಟು ರೂ. 2,77,500/- ವಿದ್ಯಾರ್ಥಿ ವೇತನ ವಿತರಿಸಲಾಯಿತು.

ನಗರದ ದುರ್ಗದ ಸಿರಿ ಹೋಟೆಲ್‌ನಲ್ಲಿ ಮಂಗಳವಾರ ಕೆನರಾ ಬ್ಯಾಂಕ್ ವತಿಯಿಂದ ಹಮ್ಮಿಕೊಂಡಿದ್ದ ಕಾರ್ಯಕ್ರಮದಲ್ಲಿ ಕೆನರಾ ಬ್ಯಾಂಕ್ ಮಣಿಪಾಲ್‌ನ ಜನರಲ್ ಮ್ಯಾನೇಜರ್ ಎಂ.ಜಿ.ಪಂಡಿತ್ ಹಾಗೂ ಸಹಾಯಕ ಜನರಲ್ ಮ್ಯಾನೇಜರ್ ವೈವಿನ್ ಶಿವಪ್ರಸಾದ್ ವಿದ್ಯಾರ್ಥಿ ವೇತನ ವಿತರಿಸಿದರು.

ಕೆನರಾ ವಿದ್ಯಾಜ್ಯೋತಿ ಯೋಜನೆಯಡಿ ಸಾಮಾಜಿಕವಾಗಿ, ಆರ್ಥಿಕವಾಗಿ ಹಿಂದುಳಿದಿರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡದ 5,6 ಮತ್ತು 7ನೇ ತರಗತಿ ವಿದ್ಯಾರ್ಥಿನಿಯರಿಗೆ ತಲಾ ರೂ.2500/- ಮತ್ತು 8,9 ಮತ್ತು 10ನೇ ತರಗತಿ ವಿದ್ಯಾರ್ಥಿನಿಯರಿಗೆ ತಲಾ ರೂ.5000/-






ವಿದ್ಯಾರ್ಥಿ ವೇತನ ನೀಡಲಾಯಿತು.

ಈ ವೇಳೆ ಮಾತನಾಡಿದ ಕೆನರಾ ಬ್ಯಾಂಕ್ ಮಣಿಪಾಲ್‌ನ ಜನರಲ್ ಮ್ಯಾನೇಜರ್ ಎಂ.ಜಿ.ಪಂಡಿತ್, ಕೆನರಾ ವಿದ್ಯಾಜ್ಯೋತಿ ಯೋಜನೆ ಕಳೆದ 10 ವರ್ಷಗಳಿಂದ ಚಾಲ್ತಿಯಲ್ಲಿದೆ. ಈ ಯೋಜನೆಯಡಿ ಸರ್ಕಾರಿ ಹಾಗೂ ಅನುದಾನಿತ ಶಾಲೆಗಳ್ಲಿ ವ್ಯಾಸಂಗ ಮಾಡುತ್ತಿರುವ 5,6 ಮತ್ತು 7ನೇ ತರಗತಿ ಹಾಗೂ 8,9 ಮತ್ತು 10ನೇ ತರಗತಿಯ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ವಿದ್ಯಾರ್ಥಿನಿಯರಿಗೆ ವಿದ್ಯಾರ್ಥಿ ವೇತನ ನೀಡಲಾಗುತ್ತದೆ. ದೇಶದ ಎಲ್ಲಾ ಕೆನರಾ ಬ್ಯಾಂಕ್ ಶಾಖೆಗಳಲ್ಲಿಯೂ ಕೆನರಾ ವಿದ್ಯಾಜ್ಯೋತಿ ಯೋಜನೆ ಜಾರಿಯಲ್ಲಿದೆ. ಈ ಯೋಜನೆಯ ಲಾಭ ಪಡೆದ ವಿದ್ಯಾರ್ಥಿನಿಯರಿಗೆ ಉನ್ನತ ಶಿಕ್ಷಣದ ವಿದ್ಯಾಭ್ಯಾಸಕ್ಕಾಗಿ ಸಾಲಸೌಲಭ್ಯವನ್ನೂ ನೀಡಲಾಗುವುದು ಎಂದರು.

ವಿದ್ಯಾರ್ಥಿನಿಯರು ಇನ್ನೂ ಹೆಚ್ಚು ಕಷ್ಟಪಟ್ಟು ಓದಬೇಕು. ದೇಶದ ಉತ್ತಮ ನಾಗರಿಕರಾಗಬೇಕು ಎಂದು ಆಶಯ ವ್ಯಕ್ತಪಡಿಸಿದರು. ಲೀಡ್ ಬ್ಯಾಂಕ್ ವ್ಯವಸ್ಥಾಪಕ ಎಸ್.ತಿಪ್ಪೇಶ್ ಮಾತನಾಡಿ, ಜಿಲ್ಲೆಯಲ್ಲಿ ಒಟ್ಟು 30 ಕೆನರಾ ಬ್ಯಾಂಕ್ ಶಾಖೆಗಳಿವೆ. ಪ್ರಸ್ತುತ ಕೆನರಾ ಬ್ಯಾಂಕ್‌ನ 13 ಶಾಖೆಯ ಪ್ರತಿ ಶಾಖೆಗೆ ತಲಾ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನ ನೀಡಲಾಗಿದೆ. ಮುಂದಿನ ದಿನಗಳಲ್ಲಿ ಎಲ್ಲಾ ಶಾಖೆಗಳಲ್ಲಿಯೂ ಕೆನರಾ ವಿದ್ಯಾಜ್ಯೋತಿ ಯೋಜನೆಯಡಿ ವಿದ್ಯಾರ್ಥಿ ವೇತನ ನೀಡಲಾಗುವುದು ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಕೆನರಾ ಬ್ಯಾಂಕ್ ಸಹಾಯಕ ಜನರಲ್ ಮ್ಯಾನೇಜರ್ ವೈವಿನ್ ಶಿವಪ್ರಸಾದ್ ಸೇರಿದಂತೆ ಕೆನರಾ ಬ್ಯಾಂಕ್ ಸಿಬ್ಬಂದಿ ಹಾಗೂ ವಿದ್ಯಾರ್ಥಿನಿಯರು, ಶಾಲೆಯ ಶಿಕ್ಷಕರು ಇದ್ದರು.

## ಫಾಸ್ಟ್ ನ್ಯೂಸ್

### ನಟ ಪ್ರಕಾಶ್ ರಾಜ್‌ಗೆ ಭಾರತ ಸೂಕ್ತವಾದ ಸ್ಥಳ ಅಲ್ಲ ಎಂದ ಮುನಿಸ್ವಾಮಿ

» **ಕೋಲಾರ**

ಚಂದ್ರಯಾನ 3 ಯಶಸ್ವಿ ಕುರಿತು ನಟ ಪ್ರಕಾಶ್ ರಾಜ್ ವ್ಯಂಗ್ಯ ಹಿನ್ನಲೆ, ಮಾತನಾಡಿದ ಸಂಸದ ಮುನಿಸ್ವಾಮಿ 'ಪ್ರಕಾಶ್ ರಾಜ್‌ಗೆ ಭಾರತ ಸೂಕ್ತವಾದ ಸ್ಥಳ ಅಲ್ಲ, ಅವರಿಗೆ ಪಾಕಿಸ್ತಾನ ಅಥವಾ ಆಫ್ಘಾನಿಸ್ತಾನ ಸೂಕ್ತವಾದ ಸ್ಥಳ. ಪ್ರಕಾಶ್ ರಾಜ್ ಭಾರತದಲ್ಲಿ ಇರಲು ಅರ್ಹರಲ್ಲ ಎಂದರು.

### ದತ್ತಪೀಠ ವಿವಾದಿತ ಸ್ಥಳದಲ್ಲಿರುವ ಗೋರಿಗಳ ಸ್ಥಳಾಂತರಕ್ಕೆ ಶ್ರೀರಾಮಸೇನೆ ಪಟ್ಟು

ಚಿಕ್ಕಮಗಳೂರು ಜಿಲ್ಲೆಯಲ್ಲಿ ದತ್ತಪೀಠ ವಿವಾದ ಮತ್ತೆ ಮುನ್ನಲೆಗೆ ಬಂದಿದೆ. ವಿವಾದಿತ ಸ್ಥಳದಲ್ಲಿರುವ ಗೋರಿಗಳ ಸ್ಥಳಾಂತರಕ್ಕೆ ಶ್ರೀರಾಮಸೇನೆ ಪಟ್ಟು ಹಿಡಿದಿದೆ. ಅರ್ಚಕರ ನೇಮಕ, ದತ್ತಪೀಠ ವ್ಯವಸ್ಥಾಪನಾ ಸಮಿತಿ ರದ್ದು ಮಾಡದಂತೆ ಆಗ್ರಹಿಸಿ ಚಿಕ್ಕಮಗಳೂರು ಡಿಸಿ ಮೀನಾ ನಾಗರಾಜ್‌ಗೆ ಶ್ರೀರಾಮಸೇನೆ ಮನವಿ ಮಾಡಿದೆ. ಗೋರಿಗಳ ಸ್ಥಳಾಂತರಕ್ಕೆ ಆಗ್ರಹಿಸಿ ದತ್ತಮಾಲಾ ಅಭಿಯಾನಕ್ಕೆ ನಿರ್ಧಾರ ಮಾಡಿದ್ದು ಅಕ್ಟೋಬರ್ 30ರಿಂದ ನವೆಂಬರ್ 3ರವರೆಗೆ ಅಭಿಯಾನ ನಡೆಯಲಿದೆ.

### ತಮಿಳುನಾಡಿಗೆ ನೀರು ಬಿಟ್ಟ ಬಗ್ಗೆ ರಾಮಲಿಂಗಾರೆಡ್ಡಿ ಹೇಳಿದ್ದೇನು?

ತಮಿಳುನಾಡಿಗೆ ನೀರು ಬಿಡುವುದನ್ನು ಖಂಡಿಸಿ ಪ್ರತಿಭಟನೆ ವಿಚಾರಕ್ಕೆ ಸಂಬಂಧಿಸಿ ರಾಮನಗರದಲ್ಲಿ ಸಾರಿಗೆ ಇಲಾಖೆ ಸಚಿವ ರಾಮಲಿಂಗಾರೆಡ್ಡಿ ಪ್ರತಿಕ್ರಿಯೆ ನೀಡಿದ್ದಾರೆ. ನಮ್ಮಲ್ಲಿ ಸಾಕಷ್ಟು ನೀರು ಇದ್ದಿದ್ರೆ ತಮಿಳುನಾಡಿಗೆ ಬಿಡಬಹುದಿತ್ತು. ನೀರು ಬಿಡುವುದಿಲ್ಲ ಎಂಬುದು ಕೂಡ ಕಷ್ಟ. ಕಳೆದ ಬಾರಿ ಮಳೆಯಾಗಿದ್ದಾಗ ತಮಿಳುನಾಡಿಗೆ ನೀರು ಬಿಡಲಾಗಿತ್ತು. ಈಗ ಮಳೆ ಇಲ್ಲ, ನಮ್ಮಲ್ಲೇ ನೀರಿನ ಕೊರತೆಯಿದೆ. ಮಳೆ ಬರಲಿ ಎಂದು ದೇವರಲ್ಲಿ ನಾನು ಪ್ರಾರ್ಥನೆ ಮಾಡುತ್ತೇನೆ ಎಂದರು.

### ರಾಮಪುರ ಬಿಡಾರದಲ್ಲಿ ಎಲೆಫ್ಯಾಂಟ್ ಫೀಡಿಂಗ್ ಕ್ಯಾಂಪ್‌ಗೆ ಚಿಂತನೆ

ಬಂಡಿಪುರಕ್ಕೆ ಮತ್ತಷ್ಟು ಪ್ರವಾಸಿಗರನ್ನ ಸೆಳೆಯಲು ಅರಣ್ಯಾಧಿಕಾರಿಗಳು ಮಾಸ್ಟರ್ ಪ್ಲಾನ್ ಮಾಡಿದ್ದಾರೆ. ಆನೆಗಳ ಸಂಖ್ಯೆಯಲ್ಲಿ ಬಂಡಿಪುರಕ್ಕೆ ಮೊದಲ ಸ್ಥಾನ ಬಂದ ಬೆನ್ನಲ್ಲೆ ಹೊಸ ಯೋಜನೆಗೆ ಇಲಾಖೆ ಮುಂದಾಗಿದೆ. ರಾಮಪುರ ಆನೆ ಬಿಡಾರದಲ್ಲಿ ಎಲೆಫ್ಯಾಂಟ್ ಫೀಡಿಂಗ್ ಕ್ಯಾಂಪ್ ಸ್ಥಾಪನೆಗೆ ಚಿಂತನೆ ನಡೆದಿದೆ. ಈ ಕುರಿತು ಬಂಡಿಪುರ ಸಿಎಫ್ ರಮೇಶ್ ಕುಮಾರ್ ಪಿಸಿಸಿಎಫ್ ಗೆ ವರದಿ ಸಲ್ಲಿಸಿದ್ದಾರೆ.

### ಎಸ್.ಈಶ್ವರಪ್ಪ ವಿರುದ್ಧ ಬಿ.ಸಿ.ಪಾಟೀಲ್ ವಾಗ್ದಾಳಿ

ಪುತ್ರ ಕಾಂತೇಶ್‌ಗೆ ಈಶ್ವರಪ್ಪ ಹಾವೇರಿ ಕ್ಷೇತ್ರ ಟಿಕೆಟ್ ಕೇಳಿದ ವಿಚಾರಕ್ಕೆ ಸಂಬಂಧಿಸಿ ಹಾವೇರಿಯಲ್ಲಿ ಕೆ.ಎಸ್.ಈಶ್ವರಪ್ಪ ವಿರುದ್ಧ ಬಿ.ಸಿ.ಪಾಟೀಲ್ ವಾಗ್ದಾಳಿ ನಡೆಸಿದರು. ಈಶ್ವರಪ್ಪ ಇಲ್ಲಿಯೂ ಪುತ್ರನನ್ನು ಬಿಟ್ಟು ವಾತಾವರಣ ಕೆಡಿಸುತ್ತಿದ್ದಾರೆ. ಈ ಹಿಂದೆ .ಈಶ್ವರಪ್ಪ ವಲಸಿಗ ಶಾಸಕರ ಬಗ್ಗೆ ಮಾತನಾಡಿದ್ದಾರೆ. ಮತ್ತೆ ಕಾಲ್ ಮಾಡಿದಾಗ ನಾನು ಹೇಳಿಲ್ಲ, ಕ್ಷಮಿಸಿ ಎಂದು ಹೇಳ್ತಾರೆ. ಹಿರಿಯ ನಾಯಕರಾಗಿ ಮಕ್ಕಳಾಟದ ರೀತಿ ಮಾತನಾಡಿದರೆ ಹೇಗೆ? ಸರ್ವೆ ನೋಡಿ ಹಾವೇರಿ ಕ್ಷೇತ್ರದ ಲೋಕಸಭಾ ಅಭ್ಯರ್ಥಿ ಬಗ್ಗೆ ನಿರ್ಧಾರ ಮಾಡಲಾಗುತ್ತೆ. ಏನೂ ಇಲ್ಲದೆ ಸುಮ್ಮನೆ ಇಲ್ಲಿಗೆ ಬಂದು ವಾತಾವರಣ ಕೆಡಿಸುತ್ತಿದ್ದಾರೆ ಎಂದು ವಾಗ್ದಾಳಿ ನಡೆಸಿದರು.

### ಮಾಜಿ ಸಿಎಂಗಳಾದ ಬಿಎಸ್‌ವೈ, ಬೊಮ್ಮಾಯಿ, ಡಿವಿಎಸ್‌ಗೆ ಸರ್ವಪಕ್ಷ ಸಭೆಗೆ ಆಹ್ವಾನ

ವಿಧಾನಸೌಧದಲ್ಲಿ ನಾಳೆ ಸಿಎಂ ಸಿದ್ದರಾಮಯ್ಯ ನೇತೃತ್ವದಲ್ಲಿ ಸರ್ವಪಕ್ಷಗಳ ಸಭೆ ನಡೆಯಲಿದೆ. ಸರ್ವಪಕ್ಷ ಸಭೆಗೆ ಬಿಜೆಪಿಯ ಮೂವರು ಮಾಜಿ ಸಿಎಂಗಳಿಗೆ ಆಹ್ವಾನಿಸಲಾಗಿದೆ. ಮಾಜಿ ಸಿಎಂಗಳಾದ ಬಿಎಸ್ ಯಡಿಯೂರಪ್ಪ, ಬಸವರಾಜ ಬೊಮ್ಮಾಯಿ, ಡಿವಿ ಸದಾನಂದ ಗೌಡರಿಗೆ ಆಹ್ವಾನ ನೀಡಲಾಗದೆ. ಪತ್ರದ ಮೂಲಕ ಬಿ.ಎಸ್.ಯಡಿಯೂರಪ್ಪ, ಬೊಮ್ಮಾಯಿಗೆ ಆಹ್ವಾನಿಸಿದ್ದು ದೂರವಾಣಿ ಕರೆ ಮೂಲಕ ಡಿ.ವಿ.ಸದಾನಂದಗೌಡಗೆ ಆಹ್ವಾನ ನೀಡಲಾಗಿದೆ.

### ವಿಶೇಷ ಉಡುಗೊರೆ

ವರಮಹಾಲಕ್ಷ್ಮಿ ಹಬ್ಬಕ್ಕೆ ಮುಜರಾಜಿ ದೇವಸ್ಥಾನಗಳಲ್ಲಿ ಮಹಿಳೆಯರಿಗೆ ಅರಿಶಿಣ, ಕುಂಕುಮ, ಬಳೆ ವಿತರಣೆ ಮಾಡಲು ನಿರ್ಧರಿಸಲಾಗಿದೆ. ಅರಿಶಿಣ, ಕುಂಕುಮ, ಬಳೆ ವಿತರಿಸುವಂತೆ ಸುತ್ತೋಲೆ ಹೊರಡಿಸಲಾಗಿದೆ. ವೆಚ್ಚವನ್ನು ಆಯಾ ದೇವಸ್ಥಾನದ ನಿಧಿಯಿಂದ ಭರಿಸಲು ಇಲಾಖೆ ಸೂಚಿಸಿದೆ.

# ತಾಯಿ ಮಕ್ಕಳ ಆಸ್ಪತ್ರೆಗೆ ಶೀಘ್ರ ಮಂಜೂರು

■ **ಹೊಸದುರ್ಗ**

ಹೊಸದುರ್ಗ ಪಟ್ಟಣದ ಸಾರ್ವಜನಿಕ ಆಸ್ಪತ್ರೆ ಆವರಣದಲ್ಲಿ ತಾಯಿ ಮಕ್ಕಳ ಆಸ್ಪತ್ರೆ ಮಂಜೂರು ಮಾಡುವ ಬಗ್ಗೆ ಮುಖ್ಯಮಂತ್ರಿಗಳು ಹಾಗೂ ಆರೋಗ್ಯ ಸಚಿವರ ಬಳಿ ಒತ್ತಾಯಿಸಲಾಗಿದೆ. ಏಪ್ರಿಲ್ ತಿಂಗಳ ನಂತರ ಮಂಜೂರಾಗುವ ಸಾಧ್ಯತೆಯಿದೆ ಎಂದು ಶಾಸಕ ಬಿ.ಜಿ.ಗೋವಿಂದಪ್ಪ ಭರವಸೆ ನೀಡಿದರು.

ಜಿಲ್ಲಾ ಆಡಳಿತ, ಜಿ.ಪಂ.ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ, ತಾಲ್ಲೂಕು ಆರೋಗ್ಯಾಧಿಕಾರಿ ಕಚೇರಿ ವತಿಯಿಂದ ಪಟ್ಟಣದ ಸಿದ್ಧರಾಮೇಶ್ವರ ಸಮುದಾಯ ಭವನದಲ್ಲಿ ಮಂಗಳವಾರ ಆಯೋಜಿಸಿದ್ದ 'ವಿಶ್ವ ಜನಸಂಖ್ಯಾ ದಿನಾಚರಣೆ' ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದರು.ಭಾರತಕ್ಕೆ ಸ್ವಾತಂತ್ರ್ಯ ಬಂದಾಗ, ಯಾವುದೇ ಮೂಲಸೌಕರ್ಯಗಳಿಲ್ಲದೆ ಬಡತನದಿಂದ ಕೂಡಿತ್ತು.ಅನ್ನ, ಶಿಕ್ಷಣ, ಸಾರಿಗೆ ಸೌಲಭ್ಯವೂ ಸಹ ಇರಲಿಲ್ಲ. ಆ ಸಮಯದಲ್ಲಿ ಉಚಿತ ಅಕ್ಕಿ ನೀಡಿ, ಜನರ ಹಸಿವು ನೀಗಿಸಲಾಯಿತು.



ಪ್ರಸ್ತುತ ವಸತಿ ಸೌಲಭ್ಯ, ಸಾರಿಗೆ, ಉತ್ತಮ ಶಿಕ್ಷಣ, ಉತ್ತಮ ಆರೋಗ್ಯ ಸೇರಿದಂತೆ ಹಲವು ಸೌಲಭ್ಯಗಳನ್ನು ಒದಗಿಸಿ, ದೇಶವು ಅಭಿವೃದ್ಧಿ ಪಥದತ್ತ ಸಾಗುತ್ತಿದೆ ಎಂದರು.

ಜನರಿಗೆ ಆರೋಗ್ಯ ಕಾಳಜಿ ಬಗ್ಗೆ ಹಲವು ಕಾರ್ಯಕ್ರಮ ರೂಪಿಸಿ, ಜಾಗೃತಿ ನೀಡಲು ಸರ್ಕಾರ ಹಣ ವಿನಿಯೋಗಿಸಿದೆ. ಆರೋಗ್ಯ ಇಲಾಖೆಯವರು ಸರ್ಕಾರದ ಕಾರ್ಯಕ್ರಮಗಳನ್ನು ಸದುಪಯೋಗ ಪಡೆದುಕೊಳ್ಳಬೇಕು. ಸಿಬ್ಬಂದಿಗಳು ಕರ್ತವ್ಯ ದಲ್ಲಿ ಬದ್ಧರಾಗಿವುದರಿಂದ ರಾಜ್ಯದ ಆರೋಗ್ಯ ಸಂಪತ್ತು ಸದೃಢವಾಗಿದೆ. ಆರೋಗ್ಯ ಇಲಾಖೆಯಲ್ಲಿ ಎಲ್ಲಾ ಸೇವೆ ಒದಗಿಸಲು ಬದ್ಧರಾಗಿರುವುದಾಗಿ ತಿಳಿಸಿದರು.

ತಾಲ್ಲೂಕು ನೋಡಲ್ ಅಧಿಕಾರಿ ಡಾ. ಜಯಮ್ಮ ಮಾತನಾಡಿ, ಚಾಚು ತಪ್ಪದೆ ಈ ರೀತಿಯ ಕಾರ್ಯಕ್ರಮ ಮಾಡುತ್ತಿರುವುದು ಹೊಸದುರ್ಗದಲ್ಲಿ ಮಾತ್ರ. ಜನಸಂಖ್ಯೆಯಲ್ಲಿ ಭಾರತ ಮುಂದಿದೆ. ಈ ಜನಸಂಖ್ಯೆಯನ್ನು ಸಂಪನ್ಮೂಲವನ್ನಾಗಿ ಬಳಸಿಕೊಳ್ಳಬೇಕು ಎಂದು ಅಭಿಪ್ರಾಯಪಟ್ಟರು.

ತಾಲ್ಲೂಕು ಆರೋಗ್ಯಾಧಿಕಾರಿ ಡಾ. ರಾಘವೇಂದ್ರ ಪ್ರಸಾದ್ ಜಿ.ಎಸ್, ಸಾರ್ವಜನಿಕ ಆಸ್ಪತ್ರೆ ಆಡಳಿತ ವೈದ್ಯಾಧಿಕಾರಿ ಡಾ. ಸಂಜಯ್ ಯು.ಎಸ್, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ತಾಲ್ಲೂಕು ಅಧ್ಯಕ್ಷ ಆರ್. ಲಕ್ಷಯ್ಯ, ಆರೋಗ್ಯ ಸುರಕ್ಷಾ ಅಧಿಕಾರಿ ಸಿದ್ದರಾಮಪ್ಪ, ಭಾರತ ಸೇವಾದಳದ ಅಧ್ಯಕ್ಷ ಎಮ್.ಆರ್.ಸಿ ಮೂರ್ತಿ, ಮುಖಂಡರುಗಳಾದ ಕೆ.ಸಿ. ನಿಂಗಪ್ಪ, ಡಾ. ಸುಮಾ, ಡಾ. ಭಾರತಿ, ಡಾ. ರಶ್ಮಿ, ಡಾ. ದಿಲೀಪ್, ಡಾ. ಲಕ್ಷ್ಮೀಕಾಂತ್, ಡಾ. ಪರಶುರಾಮ್ ಸೇರಿದಂತೆ ಆರೋಗ್ಯ ಇಲಾಖೆ ಸಿಬ್ಬಂದಿಗಳಿದ್ದರು.

# ಪ್ರತಿಯೊಬ್ಬರಿಗೂ ಮೂಲಭೂತ ಹಕ್ಕುಗಳನ್ನು ರಕ್ಷಿಸಿಕೊಳ್ಳುವ ಹೊಣೆಗಾರಿಕೆಯಿದೆ: ನ್ಯಾ.ಚರಿತ

» **ಹೊಸದುರ್ಗ**

ಕಾನೂನಿನ ಮುಂದೆ ಸರ್ವರು ಸಮಾನರು, ಕಾನೂನಿಗಿಂತ ಶ್ರೇಷ್ಠರು ಯಾರು ಇಲ್ಲ. ಕಾನೂನಿಗೆ ಪ್ರತಿಯೊಬ್ಬರು ತಲೆಬಾಗಲೇಬೇಕು. ದೇಶದ ಪ್ರತಿಯೊಬ್ಬ ಪ್ರಜೆಗೂ ಸಂವಿಧಾನದ ಮೂಲಭೂತ ಹಕ್ಕುಗಳು ಮತ್ತು ಕರ್ತವ್ಯಗಳ ಬಗ್ಗೆ ಸಾಮಾನ್ಯ ಜ್ಞಾನವಿರಬೇಕು. ಅದರ ಜೊತೆಗೆ ಮೂಲಭೂತ ಹಕ್ಕುಗಳನ್ನು ರಕ್ಷಿಸಿಕೊಳ್ಳುವ ಹೊಣೆಗಾರಿಕೆಯೂ ಇರಬೇಕೆಂದು ಅಪಾರ ಸಿವಿಲ್ ನ್ಯಾಯಾಧೀಶೆ ಎಚ್.ಪಿ.ಚರಿತ ಹೇಳಿದರು.

ಪಟ್ಟಣದ ಸರ್ಕಾರಿ ಪದವಿ ಪೂರ್ವ ಕಾಲೇಜು ಸಭಾಂಗಣದಲ್ಲಿ ಮಂಗಳವಾರ ತಾಲೂಕು ಕಾನೂನು ಸೇವಾ ಸಮಿತಿ, ವಕೀಲರ ಸಂಘ ಮತ್ತು ಸರ್ಕಾರಿ ಪದವಿ ಪೂರ್ವ ಕಾಲೇಜು ಇವರುಗಳ ಸಂಯುಕ್ತಾಶ್ರಯದಲ್ಲಿ ಆಯೋಜಿಸಿದ್ದ ಮೂಲಭೂತ ಹಕ್ಕುಗಳು ಮತ್ತು ಕರ್ತವ್ಯಗಳು ಹಾಗೂ ಪೋಕ್ಸೋ ಕಾಯ್ದೆ ಕುರಿತ ಕಾನೂನು ಅರಿವು ಕಾರ್ಯಕ್ರಮವನ್ನು ದೀಪ ಬೆಳಗಿಸುವ ಮೂಲಕ ಉದ್ಘಾಟಿಸಿ ಅವರು ಮಾತನಾಡಿದರು.

ಮೂಲಭೂತ ಹಕ್ಕುಗಳು ವ್ಯಕ್ತಿಗಳ ಬೌದ್ಧಿಕ, ನೈತಿಕ ಮತ್ತು ರಕ್ಷಣೆಗೆ ಅಗತ್ಯವಾದವುಗಳಾಗಿವೆ. ಈ ಹಕ್ಕುಗಳು ವ್ಯಕ್ತಿಗಳ ಅಸ್ತಿತ್ವ ಮತ್ತು ಸರ್ವಾಂಗೀಣ ಅಭಿವೃದ್ಧಿಗೆ ಪೂರಕವಾಗಿವೆ. ಇವುಗಳಲ್ಲಿ ಸಾಮಾನ್ಯವಾಗಿ ವೈಯಕ್ತಿಕ ಹಕ್ಕುಗಳು ಸೇರಿವೆ. ದೇಶದ ಪ್ರತಿಯೊಬ್ಬ ಪ್ರಜೆಯೂ ತಮ್ಮ ಹಕ್ಕುಗಳಿಗೆ ಧಕ್ಕೆಯಾದಲ್ಲಿ ಕೋರ್ಟ್ ಮೊರೆ ಹೋಗಿ ರಕ್ಷಣೆ ಪಡೆಯಬಹುದು. ಪ್ರತಿಯೊಬ್ಬರು ಕೂಡ ಮೂಲಭೂತ ಹಕ್ಕುಗಳ ಜೊತೆಗೆ ಮೂಲಭೂತ ಕರ್ತವ್ಯಗಳನ್ನು



ಕಾಪಾಡಿಕೊಳ್ಳಬೇಕೆಂದು ತಿಳಿಸಿದರು.

ಸಹಾಯಕ ಸರ್ಕಾರಿ ಅಭಿಯೋಜಕ ಪಿ.ರುದ್ರಮುನಿ ಮಾತನಾಡಿ, ವಿದ್ಯಾರ್ಥಿಗಳಿಗೆ ಕಾನೂನಿನ ಬಗ್ಗೆ ಸಾಮಾನ್ಯ ಜ್ಞಾನವಿರಬೇಕು. ಮೂಲಭೂತ ಹಕ್ಕುಗಳು ಮತ್ತು ಕರ್ತವ್ಯಗಳಿಗೆ ವ್ಯತ್ಯಾಸವಿದೆ. ಇವುಗಳಿಗೆ ಧಕ್ಕೆಯಾದರೆ, ಕೋರ್ಟ್ ಮೊರೆ ಹೋಗಿ ರಕ್ಷಣೆ ಪಡೆಯಬಹುದು. ಪೋಕ್ಸೋ ಕಾಯ್ದೆ ಬಾಲಕಿಯರಿಗೆ ಮಾತ್ರವಲ್ಲ, ಬಾಲಕರಿಗೂ ಅನ್ವಯವಾಗುತ್ತದೆ. 18 ವರ್ಷದ ಹೆಣ್ಣು ಮಕ್ಕಳಿಗೆ, 21 ವರ್ಷದ ಒಳಗಿನ ಗಂಡು ಮಕ್ಕಳಿಗೆ ಲೈಂಗಿಕ ಕಿರುಕುಳ, ದೌರ್ಜನ್ಯ ನಡೆದರೆ, ಯಾವುದೇ ಭಯವಿಲ್ಲದೆ ನ್ಯಾಯಾಲಯದ ಮೊರೆ ಹೋಗಿ ರಕ್ಷಣೆ ಪಡೆಯಿರಿ. ಎಂಥಹ ಬಲಾಢ್ಯನಾಗಿದ್ದರೂ, ಅಪರಾಧವೆಸಗಿ ಕಾನೂನಿನಿಂದ ತಪ್ಪಿಸಿಕೊಳ್ಳಲು ಸಾಧ್ಯವಿಲ್ಲ ಎಂದರು. ಹೊಸದುರ್ಗ ತಾಲೂಕಿನಲ್ಲಿ ಇತ್ತೀಚೆಗೆ ಪೋಕ್ಸೋ ಪ್ರಕರಣಗಳು ಹೆಚ್ಚಾಗುತ್ತಿರುವುದು ಕಳವಳಕಾರಿ ವಿಷಯ. ವಿದ್ಯಾರ್ಥಿಗಳು ಒಳ್ಳೆಯ ಓದುವ ವಯಸ್ಸಿನಲ್ಲಿ ಪ್ರೀತಿ ಪ್ರೇಮದ ಬಲೆಗೆ ಬಿದ್ದು, ವಿದ್ಯಾಭ್ಯಾಸ ಮೊಟಕುಗೊಳಿಸಿಕೊಳ್ಳಬೇಡಿ. ಸಾಮಾಜಿಕ ಜಾಲತಾಣಗಳು ನಮ್ಮ ನೆಮ್ಮದಿಯನ್ನು ಹಾಳು ಮಾಡುತ್ತವೆ. ತಂತ್ರಜ್ಞಾನ ಎಷ್ಟೇ ಬೆಳೆದಿದ್ದರೂ, ಅದನ್ನು ಪೂರಕವಾಗಿ ಬಳಸಿಕೊಳ್ಳಿ ಎಂದು ವಿದ್ಯಾರ್ಥಿಗಳಿಗೆ ಸಲಹೆ ನೀಡಿದರು.

ಈ ವೇಳೆ ಕಾರ್ಯಕ್ರಮದ ಅಧ್ಯಕ್ಷತೆಯನ್ನು ಕಾಲೇಜು ಪ್ರಾಂಶುಪಾಲ ಎಂ.ಜೆ. ವಿಶ್ವನಾಥ್ ವಹಿಸಿದ್ದರು. ವಕೀಲರ ಸಂಘದ ಕಾರ್ಯದರ್ಶಿ ಬಸವಲಿಂಗಪ್ಪ ಮತ್ತು ಪ್ಯಾನಲ್ ವಕೀಲರಾದ ಲಲಿತಾ ಹಿರೇಮಠ್ ಸೇರಿದಂತೆ ಕಾಲೇಜು ಉಪನ್ಯಾಸಕರು ಹಾಗೂ ನೂರಾರು ವಿದ್ಯಾರ್ಥಿಗಳು ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

# ಗ್ರಾ.ಪಂ.ಗಳಲ್ಲಿ ತಿಂಗಳಿಗೆ ಒಮ್ಮೆ ನೀರು ನೈರ್ಮಲ್ಯ ಸಮಿತಿ ಸಭೆ ನಡೆಸಿ



» **ಮೊದಲ ಪುಟದಿಂದ**


ಪಿಡಿಓಗಳು ಸಲಹೆ ಸೂಚನೆಗಳನ್ನು ಪಾಲನೆ ಮಾಡುವುದರಿಂದ ತುರ್ತು ಆರೋಗ್ಯ ಸಮಸ್ಯೆಗಳನ್ನು ಬೇಗನೆ ನಿರ್ವಹಣೆ ಮಾಡಬಹುದು ಎಂದರು. ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿ ಎನ್.ಎಸ್.ಮಂಜುನಾಥ್ ಮಾತನಾಡಿ, ಗ್ರಾಮ ನೀರು ಸರಬರಾಜ ಮತ್ತು ನೈರ್ಮಲ್ಯಯ ಸಮಿತಿ ಉದ್ದೇಶ ಜವಾಬ್ದಾರಿ ಹಾಗೂ ಕಾರ್ಯವಿಧಾನಗಳ ಬಗ್ಗೆ ತಿಳಿಸುತ್ತಾ, ಖಾಲಿ ನಿವೇಶನಗಳಲ್ಲಿ ತ್ಯಾಜ್ಯ ವಿಲೇವಾರಿ ಕೊಳಚೆ, ನೀರು ನಿಲ್ಲಲು ಅವಕಾಶ ನೀಡಬಾರದು. ಇದರ ಬಗ್ಗೆ ನೀಡುವ ಮಾಲೀಕರಿಗೆ ಅರಿವು ಮೂಡಿಸಬೇಕು. ಖಾಲಿ ನಿವೇಶನದಲ್ಲಿ ಹೇರಳವಾಗಿ ಬೆಳೆದಿರುವ ಕಲೆ ಗಿಡಗಳನ್ನು ಸ್ವಚ್ಛಗೊಳಿಸಬೇಕು. ಸಾರ್ವಜನಿಕರಿಗೆ ಶುದ್ಧ ಕುಡಿಯುವ ನೀರನ್ನು ಪೂರೈಸುವ ಉದ್ದೇಶದಿಂದ ಜಲಮೂಲಗಳ ಸ್ವಚ್ಛತೆ ಸುಸ್ಥಿತಿಯಲ್ಲಿ ಇಡುವುದು. ನೀರಿನ ಸ್ಥಾವರ ಜಲಮೂಲ ಹಾಗೂ ಸುತ್ತಮುತ್ತಲಿನ ಪ್ರದೇಶಗಳನ್ನು ಸ್ವಚ್ಛವಾಗಿ ಇಡಿಸಲು ಗ್ರಾಮ ಪಂಚಾಯಿತಿ ಕ್ರಮಕೈಗೊಳ್ಳಬೇಕು. ಕಾಲಕಾಲಕ್ಕೆ ಕುಡಿಯುವ ನೀರಿನ ಮೂಲಗಳಿಗೆ ಕ್ಲೋರಿನೇಷನ್ ಮಾಡಿಸಬೇಕು. ಸ್ಥಳಿಯ ಆರೋಗ್ಯ ಇಲಾಖೆಯ ಆರೋಗ್ಯ ನಿರೀಕ್ಷಣಾಧಿಕಾರಿಗಳಿಂದ ಆಗಾಗ ನೀರು ಕುಡಿಯಲು ಯೋಗ್ಯವಾಗಿದೆತಯಾ ಎಂಬುದರ ಬಗ್ಗೆ ಖಚಿತತೆ ಪಡೆಸಿಕೊಳ್ಳಬೇಕು. ಘನ ತ್ಯಾಜ್ಯ ವಸ್ತುಗಳನ್ನ ಸರಿಯಾದ ಜಾಗದಲ್ಲಿ ವಿಲೇವಾರಿ ಮಾಡಬೇಕು ಎಂದರು. ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಿ ಮೂಗಪ್ಪನವರು ಮಾತನಾಡಿ ಕೈ ತೊಳೆಯುವುದು, ನೊಣಗಳಿಂದ ಆಹಾರ ಸಂರಕ್ಷಣೆ ಮಾಡಿಕೊಳ್ಳುವುದರ ಬಗ್ಗೆ ಮಾಹಿತಿ ನೀಡಿದರು. ಸಭೆಯಲ್ಲಿ ಆರೋಗ್ಯ ನಿರೀಕ್ಷಣಾಧಿಕಾರಿಗಳಾದ ಶ್ರೀಧರ್, ಸುನಿಲ್ ಡಾ. ತಿಮ್ಮೇಗೌಡ, ಗ್ರಾ.ಪಂ. ಅಧ್ಯಕ್ಷೆ ಕೆ.ಹಾಲಮ್ಮ ಉಪಾಧ್ಯಕ್ಷೆ ಗೀತಾ ಶಿವಮೂರ್ತಿ, ಪಿ ಡಿ ಓ ಹಸ್ನಿರಾ ಬಾನು.ಎಸ್.ಡಿ ಎ.ರಾಮಕೃಷ್ಣಪ್ಪ ಗ್ರಾಮ ಪಂಚಾಯಿತಿಯ ಸರ್ವ ಸದಸ್ಯರು ಸಭೆಯಲ್ಲಿ ಹಾಜರಿದ್ದರು. ಇದೇ ಸಂದರ್ಭದಲ್ಲಿ ಮಾಹಿತಿ ಕರಪತ್ರಗಳನ್ನು ವಿತರಿಸಲಾಯಿತು.

# ಜಿಲ್ಲೆಯಲ್ಲಿ ಸಾರ್ವಜನಿಕರ ಸುರಕ್ಷಿತ ಪ್ರಯಾಣ ಸುಗಮ ಸಂಚಾರಕ್ಕೆ ಅಗತ್ಯವಿರುವ ಕ್ರಮಕೈಗೊಳ್ಳಿ: ಡಾ.ವೆಂಕಟೇಶ್

» **ದಾವಣಗೆರೆ**

ನಗರದಲ್ಲಿ ವಾಹನಗಳ ಸುಗಮಗೊಳಿಸುವುದು ಮತ್ತು ರಸ್ತೆ ಅಪಘಾತಗಳ: ತಡೆಗಟ್ಟುಲು ಅಗತ್ಯ ಕ್ರಮ ಕೈಗೊಳ್ಳಬೇಕೆಂದು ಜಿಲ್ಲಾಧಿಕಾರಿ ಡಾ. ವೆಂಕಟೇಶ್ ಎಂ.ವಿ ತಿಳಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಮಂಗಳವಾರ ನಡೆದ ಜಿಲ್ಲಾ ರಸ್ತೆ ಸುರಕ್ಷಾತ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಸಾರ್ವಜನಿಕರು



ರಸ್ತೆಯಲ್ಲಿ ಸಂಚರಿಸುವಾಗ ಸಂಚಾರಿ ನಿಯಮಗಳನ್ನು ಸುರಕ್ಷಿತ ನಿಯಮಗಳನ್ನು ಚಾಚು ತಪ್ಪದೇ ಪಾಲಿಸದರೇ ಆಗ ಮಾತ್ರ ಅಪಘಾತದಿಂದ ದೂರವಿರಲು ಸಾಧ್ಯ ಎಂಬುದನ್ನು ಪ್ರತಿಯೊಬ್ಬರ ಗಮನದಲ್ಲಿಸಬೇಕು ಎಂದರು.

ಜಿಲ್ಲೆಯಲ್ಲಿ 28 ಮಾರಣಾಂತಿಕ ತೀವ್ರ ಅಪಘಾತ ಸ್ಥಳಗಳನ್ನು ಗುರುತಿಸಿದ್ದು, ಇಲ್ಲಿ ಸಂಭವಿಸುವ ಅಪಘಾತಗಳ ಪ್ರಮಾಣವನ್ನು ಕಡಿಮೆ ಮಾಡಲು ಪೋಲಿಸ್ ಇಲಾಖೆ ಮತ್ತು ಲೋಕೋಪಯೋಗಿ ಹಾಗೂ ಇತರೆ ಇಲಾಖೆಗಳು ಸೂಕ್ತ ಕ್ರಮವಹಿಸಬೇಕು.

ಜಿಲ್ಲೆಗೆ ಆಗಮಿಸುವ ಜನರಿಗೆ ಯಾವುದೇ ರೀತಿಯ ಗೊಂದಲ ಉಂಟಾಗದಂತೆ ರಸ್ತೆ ಮಾರ್ಗಗಳಲ್ಲಿ ಹಾಗೂ ರಾಷ್ಟ್ರೀಯ ಹೆದ್ದಾರಿ ಮತ್ತು ರಾಜ್ಯ ಹೆದ್ದಾರಿಗಳಲ್ಲಿ ಸೂಚನಾ ಫಲಕಗಳನ್ನು ಕೂಡಲೇ ಅಳವಡಿಸಬೇಕು ಇದರಿಂದ ಸಂಭವಿಸಬಹುದಾದದ ಅಪಘಾತಗಳನ್ನು ತಪ್ಪಿಸಲು ಸಾಧ್ಯವಾಗುತ್ತದೆ ಎಂದರು.

## ಪ್ರಮುಖ ಸುದ್ದಿ

# ಆರ್ಯ ವೈಶ್ಯ ನಿಗಮದಿಂದ ಸಾಲ ಸೌಲಭ್ಯಕ್ಕೆ ಅರ್ಜಿ ಆಹ್ವಾನ

» **ಚಿತ್ರದುರ್ಗ**

ಕರ್ನಾಟಕ ಆರ್ಯ ವೈಶ್ಯ ಸಮುದಾಯ ಅಭಿವೃದ್ಧಿ ನಿಗಮದಿಂದ 2021-24ನೇ ಸಾಲಿನಲ್ಲಿ ವಿವಿಧ ಯೋಜನೆಯಡಿ ಸಾಲ, ಸಹಾಯಧನ ಸೌಲಭ್ಯಕ್ಕೆ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಆಸಕ್ತರು kacdc.karnataka.gov.in ವೆಬ್ ಸೈಟ್ ಮೂಲಕ ಅಗತ್ಯ ದಾಖಲೆಗಳೊಂದಿಗೆ 2023ರ ಸೆ. 18 ರೊಳಗೆ ಅರ್ಜಿಯನ್ನು ಸಲ್ಲಿಸಬಹುದು.

**ಅರ್ಹತೆಗಳು:** ಆರ್ಯ ವೈಶ್ಯ ಸಮುದಾಯಕ್ಕೆ ಸೇರಿದವರಾಗಿರಬೇಕು. ನಮೂನೆ-ಜಿ ಯಲ್ಲಿ ಜಾತಿ ಮತ್ತು ಆದಾಯ ಪ್ರಮಾಣ ಪತ್ರ ಪಡೆದಿರಬೇಕು. ಆರ್ಜಿದಾರರು ಕರ್ನಾಟಕ ರಾಜ್ಯದವರಾಗಿರಬೇಕು. ಹಾಗೂ ಅವರ ಖಾಯಂ ವಿಳಾಸವು ಕರ್ನಾಟಕ ರಾಜ್ಯದಲ್ಲಿರಬೇಕು. ಆರ್ಜಿದಾರರು ಆಧಾರ್‌ಗೆ ಆರ್ಜಿದಾರರ ಮೊಬೈಲ್ ನಂಬರ್ ಜೋಡಣೆ ಮಾಡಿರಬೇಕು. ಆರ್ಜಿದಾರರು ತಮ್ಮ ಬ್ಯಾಂಕ್ ಖಾತೆಗೆ ಆಧಾರ್ ಸಂಖ್ಯೆರು ಸೀಡ್ ಮಾಡಿಸಿರಬೇಕು. ಅರ್ಜಿದಾರರ ಕುಟುಂಬದ ವಾರ್ಷಿಕ ವರಮಾನ ಗ್ರಾಮಾಂತರ ಮತ್ತು ನಗರ ಪ್ರದೇಶದವರಿಗೆ ರೂ.3,00,000 ಗಳಮಿತಿಯ ಒಳಗಿರಬೇಕು. ಅರ್ಜಿದಾರರು 18 ವರ್ಷ ಮೇಲ್ಪಟ್ಟು 45 ವರ್ಷದ ಒಳಗಿನವರಾಗಿರಬೇಕು. ಒಂದು ಕುಟುಂಬದಲ್ಲಿ ಒಬ್ಬರು ಮಾತ್ರ ಸಾಲ ಸೌಲಭ್ಯ ಪಡೆಯಲು ಅರ್ಹರಾಗಿರುತ್ತಾರೆ. ಈಗಾಗಲೇ ಬೇರೆಯಾವುದೇ ನಿಗಮಗಳ ಯೋಜನೆಗಳಲ್ಲಿ ಅಥವಾ ಈ ನಿಗಮದಲ್ಲೇ ಈ ಹಿಂದೆ ಸಾಲ ಪಡೆದಿದ್ದಲ್ಲಿ ಅಂತಹ ಆಭ್ಯರ್ಥಿಗಳು ಹಾಗೂ ಅವರ ಕುಟುಂಬದವರಿಗೆ ಸಾಲ ಸೌಲಭ್ಯ ಪಡೆಯಲು ಅರ್ಹವಿರುವುದಿಲ್ಲ, ಒಂದು ಕುಟುಂಬದಲ್ಲಿ ಒಬ್ಬರು ಮಾತ್ರ ಸಾಲ ಸೌಲಭ್ಯ ಪಡೆಯಲು ಅರ್ಹರಾಗಿರುತ್ತಾರೆ (ಅರಿವು ಶೈಕ್ಷಣಿಕ ಸಾಲ ಯೋಜನೆಯಲ್ಲಿ ಮಾತ್ರ ಇಬ್ಬರಿಗೆ ಅವಕಾಶವಿರುತ್ತದೆ). ಆಯ್ಕೆ ಮಾಡುವಾಗ ಮಹಿಳೆಯರಿಗೆ ಶೇ.33% ವಿಕಲಚೇತನವರಿಗೆ ಶೇ.5% ಹಾಗೂ ತೃತೀಯ ಲಿಂಗಿಗಳಿಗೆ ಶೇ.5% ರಷ್ಟು ಮೀಸಲಾತಿ ಇರಿಸಿದೆ.

**ಸ್ವಯಂ ಉದ್ಯೋಗ ನೇರಸಾಲ:** ಸ್ವಯಂ ಉದ್ಯೋಗ ನೇರಸಾಲ ಯೋಜನೆಯಡಿ, ಅರ್ಜಿದಾರ ಕುಟುಂಬದ ವಾರ್ಷಿಕ ವರಮಾನ ಗ್ರಾಮಾಂತರ ಮತ್ತು ನಗರ ಪ್ರದೇಶದವರಿಗೆ ರೂ. 3,00,000ಗಳ ಮಿತಿಯೊಳಗಿರಬೇಕು. ಈ ಯೋಜನೆಯಲ್ಲಿ ಸಣ್ಣ ವ್ಯಾಪಾರ, ಸ್ವಯಂ ಉದ್ಯೋಗ ಇತ್ಯಾದಿ ವ್ಯಾಪಾರ ಚಟುವಟಿಕೆಗಳಿಗೆ ಕನಿಷ್ಠ ರೂ.50,000ಗಳಿಂದ ಗರಿಷ್ಟ 1,00,000ಗಳ ಸಾಲ ಒದಗಿಸಲಾಗುವುದು, ಈ ಮೊತ್ತದಲ್ಲಿ ಶೇ.20ರಷ್ಟು ಸಹಾಯಧನ ಹಾಗೂ ಶೇ.80ರಷ್ಟು ಸಾಲವನ್ನು ವಾರ್ಷಿಕ ಶೇ.4ರ ಬಡ್ಡಿದರದಲ್ಲಿ ಮಂಜೂರು ಮಾಡಲಾಗುವುದು. 2 ತಿಂಗಳ ವಿರಾಮ ಅವಧಿ ಇರುತ್ತದೆ. ನಂತರ ಸಾಲವನ್ನು 34 ಮಾಸಿಕ ಕಂತುಗಳಲ್ಲಿ ಮರುಪಾವತಿಸಬೇಕು.

**ಆಹಾರ ವಾಹಿನಿ ಯೋಜನೆ:** ಆರ್ಜಿದಾರರ ಕುಟುಂಬದ ವಾರ್ಷಿಕ ವರಮಾನ ಗ್ರಾಮಾಂತರ ಮತ್ತು ನಗರ ಪ್ರದೇಶದವರಿಗೆರೂ.6,00,000 ಮಿತಿಯೊಳಗಿರಬೇಕು. ಅರ್ಜಿದಾರರು 21 ವರ್ಷ ಮೇಲ್ಪಟ್ಟು 55 ವರ್ಷದ ಒಳಗಿನವರಾಗಿರಬೇಕು. ಆಹಾರ ವಾಹಿನಿ ಪ್ರಾರಂಭಿಸಲು ಬ್ಯಾಂಕ್, ಸಹಕಾರಿ ಸಂಘಗಳಿಂದ ಸಾಲ ಪಡೆಯಬೇಕು ಹಾಗೂ ನಿಗಮದಿಂದ ಗರಿಷ್ಠ ರೂ.2,00,000ಗಳ ಸಹಾಯಧನ ನೀಡಲಾಗುವುದು.

**ವಾಸವಿ ಜಲಶಕ್ತಿ ಯೋಜನೆ:** ವಾಸವಿ ಜಲಶಕ್ತಿ ಯೋಜನೆಯಡಿ 2 ರಿಂದ 5 ಎಕರೆ ಕೃಷಿ ಭೂಮಿ ಹೊಂದಿರವವರಿಗೆ ನೀರಾವರಿ ಸೌಲಭ್ಯವನ್ನು ಒದಗಿಸಲು ಸಾಲ, ಸಹಾಯಧನವನ್ನು ನೀಡಲಾಗುವುದು. ಆರ್ಜಿದಾರರ ಕುಟುಂಬದ ವಾರ್ಷಿಕ ವರಮಾನ ಗ್ರಾಮಾಂತರ ಮತ್ತು ನಗರ ಪ್ರದೇಶದವರಿಗೆ ರೂ. 6,00,000 ಗಳ ಮಿತಿಯೊಳಗಿರಬೇಕು. ಅರ್ಜಿದಾರರು 21 ವರ್ಷ ಮೇಲ್ಪಟ್ಟು 50 ವರ್ಷದ ಒಳಗಿನವರಾಗಿರಬೇಕು. ಈ ಯೋಜನೆಯಡಿ ಗರಿಷ್ಠ ರೂ. 2,00,000 ಗಳ ಸಾಲವನ್ನ ವಾರ್ಷಿಕ ಶೇ.4ರ ಬಡ್ಡಿದರದಲ್ಲಿ ಒದಗಿಸಲಾಗುವುದು. ವಿದ್ಯುದ್ದೀಕರಣಕ್ಕಾಗಿ ರೂ.50,000 ಗಳ ಸಹಾಯಧನ ನೀಡಲಾಗುವುದು. ಸಾಲವನ್ನು ಮರುಪಾವತಿಸಲು 6 ತಿಂಗಳ ವಿರಾಮಾವಧಿ ಇರುತ್ತದೆ ನಂತರ ಸಾಲವನ್ನು 34 ಮಾಸಿಕ ಕಂತುಗಳಲ್ಲಿ ಮರುಪಾವತಿಸಬೇಕು.

**ಅರಿವು ಶೈಕ್ಷಣಿಕ ಸಾಲ:** ಅರಿವು ಶೈಕ್ಷಣಿಕ ಸಾಲ ಯೋಜನೆಯಲ್ಲಿ ಇಂಜಿನಿಯರಿಂಗ್, ವೈದ್ಯಕೀಯ, ದಂತ ವೈದ್ಯಕೀಯ ಇತ್ಯಾದಿ ವೃತ್ತಿಪರ ಪದವಿ ಹಾಗೂ ಸ್ನಾತಕೋತ್ತರ ಪದವಿಗಳಲ್ಲಿ ಸಿಇಟಿ, ಎನ್‌ಇಇಟಿ ಮೂಲಕ ಆಯ್ಕೆಯಾಗಿ ಮತ್ತು ವೃತ್ತಿಪರ ಪಿ.ಹೆಚ್.ಡಿ. ಕೋರ್ಸ್‌ನಲ್ಲಿ ವ್ಯಾಸಂಗ ಮಾಡುವವರಿಗೆ, ಅರಿವು ಶೈಕ್ಷಣಿಕ ಸಾಲ ಯೋಜನೆಯಡಿ ವಾರ್ಷಿಕ ರೂ.1,00,000 ಗಳ ಸಾಲವನ್ನು ಶೇ.2ರ ಬಡ್ಡಿದರದಲ್ಲಿ ನೀಡಲಾಗುವುದು, ವ್ಯಾಸಂಗ ಪೂರ್ಣಗೊಂಡ ನಂತರ 4 ತಿಂಗಳ ವಿರಾಮಾವಧಿ ಇರುತ್ತದೆ. ನಂತರ ಸಾಲವನ್ನು 36 ಮಾಸಿಕ ಕಂತುಗಳಲ್ಲಿ ಮರುಪಾವತಿಸಬೇಕು.

ಅರ್ಜಿದಾರರ ಕುಟುಂಬ ವಾರ್ಷಿಕ ವರಮಾನ ಗ್ರಾಮಾಂತರ ಮತ್ತು ನಗರ ಪ್ರದೇಶದವರಿಗೆ ರೂ.6,00,000 ಗಳ ಮಿತಿಯೊಳಗಿರಬೇಕು. ಅರ್ಜಿದಾರರು 18 ವರ್ಷ ಮೇಲ್ಪಟ್ಟು 35 ವರ್ಷದ ಒಳಗಿರಬೇಕು. ಪ್ರಾಂಶುಪಾಲರಿಂದ ದೃಢೀಕರಿಸಿದ ಪ್ರಸ್ತುತ ವರ್ಷದ ವ್ಯಾಸಂಗ ಪ್ರಮಾಣ ಪತ್ರ ಮತ್ತು ನಿಗಧಿತ ಶುಲ್ಕ ನಮೂನೆ ಪತ್ರ ಹೊಂದಿರಬೇಕು. kacdc.karnataka.gov.in ವೆಬ್‌ಸೈಟ್ ಸಲ್ಲಿಸಬೇಕಾದ ದಾಖಲೆಗಳ ವಿವರವನ್ನು ತಿಳಿದುಕೊಳ್ಳಬಹುದು. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ 9448451111 ಗೆ ಸಂಪರ್ಕಿಸಬಹುದು.

## ಫಾಸ್ಟ್ ನ್ಯೂಸ್

### ವಂಡರ್‌ಲಾನಲ್ಲಿ ಮೇಲಿಂದ ಬಿದ್ದು ವ್ಯಕ್ತಿ ಸಾವು

ರಾಮನಗರ ತಾಲೂಕಿನ ಬಿಡದಿ ಬಳಿಯ ವಂಡರ್ ಲಾ ಅಮ್ಯೂಸ್ಮೆಂಟ್ ಪಾರ್ಕ್‌ನಲ್ಲಿ ಮೇಲಿಂದ ಬಿದ್ದು ವ್ಯಕ್ತಿ ಮೃತಪಟ್ಟಿದ್ದಾನೆ. ಜಡೇನಹಳ್ಳಿ ನಿವಾಸಿ 35 ವರ್ಷದ ರಾಜು ಮೃತ ದುರ್ದೈವಿ. ಸ್ಥಳಕ್ಕೆ ಬಿಡದಿ ಠಾಣೆ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

### ಚಂದ್ರಯಾನ 3 ಸೇಫ್ ಲ್ಯಾಂಡಿಂಗಾಗಿ ದೇವರ ಮೊರೆ

ನಾಳೆ ಸಂಜೆ ಚಂದ್ರನ ದಕ್ಷಣದಲ್ಲಿ ಚಂದ್ರಯಾನ 3 ಲ್ಯಾಂಡ್ ಆಗಲಿದೆ. ಹೀಗಾಗಿ ಜನರು ದೇವರ ಮೊರೆ ಹೋಗಿದ್ದಾರೆ. ವಿಜ್ಞಾನಿಗಳ ಕನಸು ಈಡೇರಬೇಕು, ಇಡಿ ವಿಶ್ವ ಭಾರತದ ಹೆಮ್ಮೆಯ ಕಡೆ ನೋಡಬೇಕು ಅಂತ ದೇವಾಲಯಗಳಲ್ಲಿ ವಿಶೇಷ ಪೂಜೆ ಸಲ್ಲಿಸಲಾಗುತ್ತಿದೆ.

### ಹೆಚ್‌ಡಿಕೆ ವಿರುದ್ಧ ಜಮೀರ್ ವಾಗ್ದಾಳಿ

ಸರ್ಕಾರದ ವಿರುದ್ಧ ಹೆಚ್‌ಡಿ ಕುಮಾರಸ್ವಾಮಿ ವರ್ಗಾವಣೆ ದಂಧೆ ಆರೋಪ ವಿಚಾರಕ್ಕೆ ಸಂಬಂಧಿಸಿ ಬೆಂಗಳೂರಿನಲ್ಲಿ ವಸತಿ ಸಚಿವ ಜಮೀರ್ ಅಹ್ಮದ್ ಖಾನ್ ವಾಗ್ದಾಳಿ ನಡೆಸಿದರು. ಮಾಜಿ ಸಿಎಂ ಕುಮಾರಸ್ವಾಮಿ ಏನೋ ಕನಸು ಇಟ್ಟುಕೊಂಡಿದ್ದರು. ಕಿಂಗ್ ಮೇಕರ್ ಆಗುತ್ತೇನೆ ಎಂದುಕೊಂಡಿದ್ದರು, ಆದ್ರೆ ಆಗಲಿಲ್ಲ ಎಂದರು.

### ಹೃದಯಾಘಾತ ಆಟೋ ಚಾಲಕ ಸ್ಥಳದಲ್ಲೇ ಸಾವು

ಹೃದಯಾಘಾತವಾಗಿ ಆಟೋ ಚಾಲಕ ಸ್ಥಳದಲ್ಲೆ ಮೃತಪಟ್ಟ ಘಟನೆ ಬೆಂಗಳೂರಿನಲ್ಲಿ ನಡೆದಿದೆ. ತಿಮ್ಮೇಶ್ (53) ಮೃತ ದುರ್ದೈವಿ. ಸಂಪಂಗಿ ರಾಮನಗರದಲ್ಲಿ ಟೀ ಕುಡಿಯಲು ಆಟೋ ನಿಲ್ಲಿಸಿ ತೆರಳುತ್ತಿದ್ದ ತಿಮ್ಮೇಶ್ ಮೃತಪಟ್ಟಿದ್ದಾರೆ. ಆಟೋದಿಂದಲೇ ಇಳಿಯುವಾಗ ಎದೆ ನೋವು ಕಾಣಿಸಿಕೊಂಡಿತ್ತು. ಎದೆಯನ್ನ ಸವರಿಸಿಕೊಳ್ಳುತ್ತ ಆಟೋದಿಂದ ತಿಮ್ಮೇಶ್ ಇಳಿದು ಹೋಗುವ ಕೊನೆಯ ದೃಶ್ಯ ಸಿಸಿಟಿವಿಯಲ್ಲಿ ಸೆರೆಯಾಗಿದೆ.

### ಗುತ್ತಿಗೆದಾರರ ಬಾಕಿ ಹಣ ಬಿಡುಗಡೆ ಮಾಡಿದ ಬಿಬಿಎಂಪಿ

ಕೊನೆಗೂ ಬಿಬಿಎಂಪಿ ಗುತ್ತಿಗೆದಾರರ ಹೋರಾಟಕ್ಕೆ ಃಃಒಕ ಮಣಿದಿದ್ದು 25 ಲಕ್ಷದೊಳಗೆ ಕಾಮಗಾರಿ ನಡೆಸಿದ ಗುತ್ತಿಗೆದಾರರ ಬಾಕಿ ಹಣ ಬಿಡುಗಡೆ ಮಾಡಿದೆ. ಮೊದಲ ಹಂತದಲ್ಲಿ 42 ಕೋಟಿ ಹಣ ಬಿಡುಗಡೆ ಮಾಡಿದೆ. ಸಣ್ಣ ಗುತ್ತಿಗೆದಾರರಿಗೆ ಬಿಲ್ ಕ್ಲಿಯರ್‌ಗೆ ಮೊದಲ ಹಂತದ ಹಣ ರಿಲೀಸ್ ಮಾಡಲಾಗಿದೆ. ತನಿಖಾ ವರದಿ ಬಂದ ಬಳಿಕ ಉಳಿದ ಗುತ್ತಿಗೆದಾರರ ಬಾಕಿ ಬಿಲ್ ಬಿಡುಗಡೆ ಮಾಡಲಾಗುತ್ತೆ ಎಂದು ಬಿಬಿಎಂಪಿ ಆಯುಕ್ತ ತುಷಾರ್ ಗಿರಿನಾಥ್ ತಿಳಿಸಿದರು.

### ಗಂಟೆಯಲ್ಲಿ ಬೆಂಗಳೂರಲ್ಲಿ 16 ಕಡೆ ಅಪಘಾತ

ಕಳೆದ 24 ಗಂಟೆಯಲ್ಲಿ ಬೆಂಗಳೂರು ನಗರದಲ್ಲಿ 16 ಕಡೆ ಅಪಘಾತ ಸಂಭವಿಸಿದೆ. 16 ಅಪಘಾತದಲ್ಲಿ ಐವರು ಮೃತಪಟ್ಟಿದ್ದು, 15 ಜನರಿಗೆ ಸಣ್ಣಪುಟ್ಟ ಗಾಯಗಳಾಗಿವೆ. ರಾಜಾಜಿನಗರ, ಬಸವನಗುಡಿ, ಹೆಣ್ಣೂರು, ವೈಟ್‌ಫೀಲ್ಡ್, ಹುಳಿಮಾವಿನಲ್ಲಿ ತಲಾ ಎರಡು ಕಡೆ ಅಪಘಾತ ಪ್ರಕರಣಗಳು ದಾಖಲಾಗಿವೆ. ಹಾಗೂ ಹೆಬ್ಬಾಳ, ಸದಾಶಿವನಗರ, ಕೆ.ಆರ್.ಪುರಂನಲ್ಲಿ ತಲಾ 1 ಅಪಘಾತ ಕೇಸ್ ದಾಖಲಾಗಿದೆ. ಹೆಬ್ಬಾಳ ಠಾಣಾ ವ್ಯಾಪ್ತಿಯಲ್ಲಿ ನಡೆದ ಅಪಘಾತದಲ್ಲಿ ಯುವಕ ಮೃತಪಟ್ಟಿದ್ದಾನೆ. ಹೆಣ್ಣೂರು ಠಾಣಾ ವ್ಯಾಪ್ತಿಯಲ್ಲಿ ನಡೆದ ಅಪಘಾತದಲ್ಲಿ ಮಹಿಳೆ ಸಾವನ್ನಪ್ಪಿದ್ದು ರಾಜಾಜಿನಗರದಲ್ಲಿ ನಡೆದ ಅಪಘಾತದಲ್ಲಿ ರಾಹುಲ್(19)ಮೃತಪಟ್ಟಿದ್ದಾನೆ.

### ಬೆಂಗಳೂರು ಸೇರಿದಂತೆ ರಾಜ್ಯದ 14 ಕಡೆ ಲೋಕಾಯುಕ್ತ ದಾಳಿ

ಬೆಂಗಳೂರು, ತುಮಕೂರು ಸೇರಿದಂತೆ ರಾಜ್ಯದ 14 ಕಡೆ ಲೋಕಾಯುಕ್ತ ದಾಳಿ ನಡೆಸಿದೆ. ಸರ್ವೆ ಅಧಿಕಾರಿ ಮನೆಗಳು, ಕಚೇರಿ ಮೇಲೆ ಲೋಕಾಯುಕ್ತ ದಾಳಿ ನಡೆಸಿದೆ. ಕೆ.ಆರ್.ಪುರ ತಾಲೂಕು ಕಚೇರಿಯ ಸರ್ವೆ ಸೂಪರ್‌ವೈಸರ್ ಕೆ.ಟಿ ಶ್ರೀನಿವಾಸಮೂರ್ತಿ ಮನೆಗಳು, ಕಚೇರಿಗಳ ಮೇಲೆ ದಾಳಿ ಆಗಿದೆ.

### ಸರ್ವಪಕ್ಷ ಸಭೆಗೆ ಕುಮಾರಸ್ವಾಮಿಗೆ ಆಹ್ವಾನ

ನಾಳೆ ವಿಧಾನಸೌಧದಲ್ಲಿ ಸಿಎಂ ಸಿದ್ದರಾಮಯ್ಯ ನೇತೃತ್ವದಲ್ಲಿ ನಡೆಯುವ ಸರ್ವಪಕ್ಷ ಸಭೆಗೆ ಮಾಜಿ ಸಿಎಂ ಊ.ಆ.ಕುಮಾರಸ್ವಾಮಿ ಅವರನ್ನು ಆಹ್ವಾನಿಸಲಾಗಿದೆ. ಸಿಎಂ ಸಿದ್ದರಾಮಯ್ಯನವರು ಊ.ಆ.ಕುಮಾರಸ್ವಾಮಿಗೆ ಆಹ್ವಾನ ನೀಡಿದ್ದಾರೆ.

# ಮೌಢ್ಯ ಪ್ರಶ್ನಿಸುವವರಿಗೆ ದುರ್ಗತಿ ಕಾದಿದೆ

» **ಚಿತ್ರದುರ್ಗ**

ಮೌಢ್ಯವನ್ನು ಪ್ರಶ್ನಿಸುವವರಿಗೆ ದುರ್ಗತಿ ಕಾದಿದೆ ಎನ್ನುವ ಸಂದೇಶವನ್ನು ದುಷ್ಠ ಶಕ್ತಿಗಳು ಹಿಂದಿನಿಂದಲೂ ನೀಡುತ್ತಾ ಬರುತ್ತಿವೆ. ಮೂಢನಂಬಿಕೆ ವಿರುದ್ದ ಹೋರಾಡಿದ ಬುದ್ದ, ಬಸವ, ಅಂಬೇಡ್ಕರ್ ಇವರುಗಳ ಜೀವನವೂ ದುರಂತಮಯವಾಗಿತ್ತು ಎಂದು ವಿಜ್ಞಾನ ಕೇಂದ್ರದ ಅಧ್ಯಕ್ಷ ಜೆ.ಯಾದವರೆಡ್ಡಿ ಹೇಳಿದರು.




ಚಿತ್ರದುರ್ಗ ವಿಜ್ಞಾನ ಕೇಂದ್ರದ ವತಿಯಿಂದ ಸರ್ಕಾರಿ ವಿಜ್ಞಾನ ಕಾಲೇಜು ಸ್ನಾತಕೋತ್ತರ ವಿಭಾಗದಲ್ಲಿ ರಾಷ್ಟ್ರೀಯ ವೈಜ್ಞಾನಿಕ ಮನೋವೃತ್ತಿ ದಿನದ ಅಂಗವಾಗಿ ಸೋಮವಾರ ವಿದ್ಯಾರ್ಥಿಗಳೊಂದಿಗೆ ಏರ್ಪಡಿಸಲಾಗಿದ್ದ ಸಂವಾದ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಮೂಢನಂಬಿಕೆಯನ್ನು ವಿರೋಧಿಸಿದ ತತ್ವಜ್ಞಾನಿ ಸಾಕ್ರೆಟಿಸ್‌ಗೆ ವಿಷ ಉಣಿಸಿ ಕೊಲ್ಲಲಾಯಿತು. ಡಾ.ಎಂ.ಎಂ.ಕಲ್ಬುರ್ಗಿ, ಪತ್ರಕರ್ತೆ ಗೌರಿ ಲಂಕೇಶ್ ಇವರುಗಳ ಹತ್ಯೆಯಾಯಿತು. ದಾರ್ಶನಿಕರು, ಚಿಂತಕರು,ವಿಚಾರವಾದಿಗಳು ಮೌಢ್ಯವನ್ನು ಪ್ರಶ್ನಿಸಿ ಪ್ರಾಣ ಕಳೆದುಕೊಂಡಿದ್ದಾರೆ. ಭಾರತ ದೇಶ ಮೌಢ್ಯದಲ್ಲಿ ಮುಂದಿದೆ. ಹುಟ್ಟಿನಿಂದ ಹಿಡಿದು ಸಾಯುವವರೆಗೂ ಪ್ರತಿಯೊಬ್ಬರು ಒಂದಲ್ಲ ಒಂದು ರೀತಿಯಲ್ಲಿ ಮೂಢನಂಬಿಕೆಯನ್ನು ಆಚರಿಸಿಕೊಂಡು ಬರುತ್ತಿರುವುದು ದೊಡ್ಡ ದುರಂತ ಎಂದು ಬೇಸರ ವ್ಯಕ್ತಪಡಿಸಿದರು.

ಮೂಢನಂಬಿಕೆ ಎನ್ನುವುದು ಮನುಷ್ಯ ಬದುಕಿರುವತನಕ ಕಾಡುತ್ತಿರುತ್ತದೆ. ದೇವರು, ಧರ್ಮದ ಹೆಸರಿನಲ್ಲಿ ದೇವದಾಸಿ ಪದ್ದತಿ ಇಂದಿಗೂ ಜೀವಂತವಾಗಿದೆ. ಚಂದ್ರಗುತ್ತಿಯ ರೇಣುಕಾ ಯಲ್ಲಮ್ಮ ದೇವಸ್ಥಾನದಲ್ಲಿ ನಡೆಯುತ್ತಿದ್ದ ಬೆತ್ತಲೆ ಸೇವೆಯನ್ನು ನಿಲ್ಲಿಸಲು ಪೊಲೀಸರು ಹಾಗೂ ಅಲ್ಲಿನವರ ಜೊತೆ ದೊಡ್ಡ ಸಂಘರ್ಷವೇ ನಡೆದು ಅಂತಿಮವಾಗಿ ಸರ್ಕಾರ ಬಿಗಿ ಕಾನೂನು ಜಾರಿಗೆ ತಂದ ಫಲವಾಗಿ ನಿಂತಿದೆ. ಮೌಢ್ಯಕ್ಕೆ ಹೆಣ್ಣು ಮಕ್ಕಳೆ ಜಾಸ್ತಿ ಬಲಿಯಾಗುತ್ತಿದ್ದರೂ. ಪ್ರಶ್ನಿಸುವ ಧೈರ್ಯ ಮಾಡುತ್ತಿಲ್ಲದಿರುವುದು ನೋವಿನ ಸಂಗತಿ ಎಂದರು.

ಜ್ಯೋತಿಷಿಗಳ ನಯ ವಂಚಕತನದಿಂದ ಆಗಬಾರದ್ದೆಲ್ಲಾ ಆಗುತ್ತಿದೆ. ನಿಜವಾಗಿಯೂ ಜ್ಯೋತಿಷಿಗಳಲ್ಲಿ ಯಾವ ಶಕ್ತಿಯೂ ಇಲ್ಲ. ಮಾಠ, ಮಂತ್ರ, ಮೋಡಿ ಈಗಲು ಇದೆ. ಜಾತಿ ಎನ್ನುವುದು ಕೂಡ ಒಂದು ಮೂಢನಂಬಿಕೆಯಿದ್ದಂತೆ. ವಿದ್ಯಾವಂತರು ಅಸ್ಪೃಶ್ಯತೆಯನ್ನು ಆಚರಿಸಿಕೊಂಡು ಆತ್ಮವಂಚನೆ ಮಾಡಿಕೊಳ್ಳುತ್ತಿದ್ದಾರೆ. ದೊಡ್ಡ ದೊಡ್ಡ ವಿಜ್ಞಾನಿಗಳು ಕುಡ ಭೌದ್ಧಿಕವಾಗಿ ದರಿದ್ರರಾಗಿದ್ದಾರೆಂದು ವಿಷಾಧಿಸಿದರು.

ಚಿತ್ರದುರ್ಗ ವಿಜ್ಞಾನ ಕೇಂದ್ರದ ಉಪಾಧ್ಯಕ್ಷ ಎಂ.ಆರ್.ದಾಸೆಗೌಡ ಮಾತನಾಡಿ ಸಮಾಜವನ್ನು ಮೌಢ್ಯ ಕಾಡುತ್ತಿರುವುದರಿಂದ ಯಾವುದು ವಿಜ್ಞಾನ, ಯಾವುದು ಮೌಢ್ಯ ಎನ್ನುವುದಕ್ಕೆ ಸ್ಪಷ್ಠ ಗೆರೆ ಎಳೆಯಬೇಕಿದೆ.

ಶಿಕ್ಷಣ ಕಲ್ಪವೃಕ್ಷವಿದ್ದಂತೆ ಎಲ್ಲವನ್ನು ಕೊಡುತ್ತದೆ. ಪ್ರಯೋಜನ ಪಡೆದುಕೊಳ್ಳಬೇಕಷ್ಟೆ. ವೈಜ್ಞಾನಿಕ ನೆಲೆಯಲ್ಲಿ ಜೀವನ ಕಟ್ಟಿಕೊಳ್ಳಬೇಕು. ಆಗ ಅನೇಕ ಅಡ್ಡಿ ಆತಂಕಗಳು ಎದುರಾಗುವುದುಂಟು. ಸತ್ಯಶೋಧನೆ ಮಾಡಬೇಕಿದೆ. ಪ್ರಯೋಗದಿಂದ ಮಾತ್ರ ಸತ್ಯ ಗೊತ್ತಾಗುತ್ತದೆ ಎನ್ನುವುದೇ ನಿಜವಾದ ವಿಜ್ಞಾನ ಎಂದು ಸ್ನಾತಕೋತ್ತರ ಪದವಿ ವಿದ್ಯಾರ್ಥಿಗಳಿಗೆ ಕರೆ ನೀಡಿದರು.

ಸರ್ಕಾರಿ ವಿಜ್ಞಾನ ಕಾಲೇಜಿನ ಪ್ರಾಚಾರ್ಯರಾದ ಪ್ರೊ.ಸಿದ್ರಾಮ ಚನಗೊಂಡ ಅಧ್ಯಕ್ಷತೆ ವಹಿಸಿದ್ದರು.

ಸ್ನಾತಕೋತ್ತರ ರಸಾಯನಶಾಸ್ತ್ರ ವಿಭಾಗದ ಮುಖ್ಯಸ್ಥ ಡಾ.ನಾಗರಾಜ್ ಡಿ. ಸಸ್ಯಶಾಸ್ತ್ರವಿಭಾಗದಮುಖ್ಯಸ್ಥಡಾ.ಸುಧಾಮ ವಿ.ಎನ್. ಚಿತ್ರದುರ್ಗ ವಿಜ್ಞಾನ ಕೇಂದ್ರದ ಖಜಾಂಚಿ ಕೆ.ರಾಮಪ್ಪ, ಸದಸ್ಯರುಗಳಾದ ಎಂ.ಬಿ.ಜಂಬುದೇವಮೂರ್ತಿ, ಮನೋಹರ್ ವೇದಿಕೆಯಲ್ಲಿದ್ದರು.

# ತಳಕು ಗ್ರಾಪಂನಲ್ಲಿ ಸಭೆ ನಡೆಸದೆ 10.50 ಲಕ್ಷ ಹಣ ದುರುಪಯೋಗ: ಆರೋಪ

» **ಚಳ್ಳಕೆರೆ**

ತಾಲ್ಲೂಕಿನ ಗ್ರಾಮ ಪಂಚಾಯಿತಿ ಕೇಂದ್ರಗಳಲ್ಲಿ ಸರ್ಕಾರಿ ಹಣವನ್ನು ಚುನಾಯಿತ ಸದಸ್ಯರ ಗಮನಕ್ಕೆ ತಾರದೆ ದುರುಪಯೋಗ ಪಡಿಸಿಕೊಳ್ಳಲಾಗಿದೆ ಎಂದು ಸದಸ್ಯರು ಆರೋಪಿಸಿ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಮತ್ತು ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿಗಳಿಗೆ ಲಿಖಿತ ದೂರು ನೀಡಿರುತ್ತಾರೆ.




ಈ ಬಗ್ಗೆ ಆರೋಪಿಸಿದ ಗ್ರಾಮ ಪಂಚಾಯಿತಿ ಸದಸ್ಯರಾದ ಟಿ.ವಾಣಿಬಾಯಿ, ನೀಲಾಬಾಯಿ, ಶಾಂತಕುಮಾರ್, ಲಕ್ಷ್ಮಕ್ಕ, ಕೆ.ತಿಪ್ಪೇಸ್ವಾಮಿ ಕಳೆದ 2022-23ನೇ ಸಾಲಿನ ದಾವಣಗೆರೆ ಕೆಇಬಿಯ ಸೆಸ್ ಮೊತ್ತ 9 ಲಕ್ಷ ಹಾಗೂ ವರ್ಗ-1ರ ಯೋಜನೆಯ 1.50 ಲಕ್ಷ ಒಟ್ಟು 10.50 ಲಕ್ಷ ಹಣ ದುರುಪಯೋಗವಾಗಿದೆ ಎಂದು ಇವರ ಆರೋಪವಾಗಿದೆ.

ಕಳೆದ ಜುಲೈ 11ರಂದು ಜಿಲ್ಲಾ ಪಂಚಾಯಿತಿ ಮತ್ತು ತಾಲ್ಲೂಕು ಪಂಚಾಯಿತಿ ಅಧಿಕಾರಿಗಳಿಗೆ ದೂರು ನೀಡಿರುವ ಸದಸ್ಯರು ಸದರಿ ಅವಧಿಯಲ್ಲಿ ಅಧಿಕಾರದಲ್ಲಿದ್ದ ಅಧ್ಯಕ್ಷರು,ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಸದಸ್ಯರ ಸಭೆ ನಡೆದೆ, ಸದಸ್ಯರ ಗಮನಕ್ಕೆ ತಾರದೆ ತಮಗೆ ಮನಬಂದಂತೆ ನಿರ್ಧಾರ ಕೈಗೊಂಡು ಖಾಸಗಿ ವ್ಯಕ್ತಿಗೆ ಚೆಕ್ ನೀಡಿ ಹಣ ಪಡೆದುಕೊಂಡಿದ್ದಾರೆಂದು ಆರೋಪಿಸಿದ್ದಾರೆ. ಗ್ರಾಮ ಪಂಚಾಯಿತಿ ಚುನಾಯಿತ ಸದಸ್ಯರ ಗಮನಕ್ಕೆ ತಾರದೆ ನಿಯಮಬಾಹಿರವಾಗಿ ಹಣ ಪಡೆದಿದ್ದು ಈ ಬಗ್ಗೆ ಪರಿಶೀಲನೆ ನಡೆಸಿ ಕಾನೂನು ಕ್ರಮ ಜರುಗಿಸಬೇಕೆಂದು ಅವರು ಒತ್ತಾಯಿಸಿದ್ದಾರೆ.

ಮನವಿ ನೀಡಿ ಒಂದು ತಿಂಗಳೇ ಕಳೆದ ಜಿಲ್ಲಾ ಮತ್ತು ತಾಲ್ಲೂಕು ಪಂಚಾಯಿತಿ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸದೆ ನಿರ್ಲಕ್ಷ್ಯ ವಹಿಸಿದ್ದು, ಸರ್ಕಾರ ಹಣ ದುರುಪಯೋಗ ತಡೆಯುವಲ್ಲಿ ಅಧಿಕಾರಿಗಳ ಮೀನಾಮೇಷ ಅನುಮಾನಕ್ಕೆ ಆಸ್ಪದ ನೀಡಿದೆ ಎಂದು ಮಾಜಿ ಸದಸ್ಯ ರಮೇಶ್‌ನಾಯ್ಕ ಆರೋಪಿಸಿದ್ದಾರೆ.

## ಕುಡಿಯುವ ನೀರು ಹಾಗೂ ಸ್ವಚ್ಚತೆ ಕುರಿತು ಮದಕರಿಪುರ ಗ್ರಾಪಂ ಸದಸ್ಯರೊಡನೆ ಅಧ್ಯಕ್ಷರ ಸಭೆ



» **ಚಿತ್ರದುರ್ಗ**

ಮದಕರಿಪುರ ಗ್ರಾಮ ಪಂಚಾಯಿತಿಗೆ ನೂತನವಾಗಿ ಅಧ್ಯಕ್ಷರಾಗಿ ಆಯ್ಕೆಯಾಗಿರುವ ಓ.ಬಸವರಾಜ್ ಸೋಮವಾರ ಸದಸ್ಯರುಗಳ ತುರ್ತು ಸಭೆ ಕರೆದು ಕುಡಿಯುವ ನೀರು ಪೂರೈಕೆ ಹಾಗೂ ಸ್ವಚ್ಚತೆ ಕುರಿತು ಚರ್ಚಿಸಿದರು.ಅಧಿಕಾರ ಸ್ವೀಕರಿಸಿದ ನಂತರ ಸದಸ್ಯರುಗಳೊಂದಿಗೆ ಸಭೆ ನಡೆಸಿ ಮಾತನಾಡಿದ ಅಧ್ಯಕ್ಷ ಓ.ಬಸವರಾಜ್ ಮದಕರಿಪುರ ಗ್ರಾಮ ಪಂಚಾಯಿತಿಗೆ ಒಳಪಡುವ ಪಿಳ್ಳೆಕೆರನಹಳ್ಳಿ ಹಾಗೂ ಮದಕರಿಪುರದಲ್ಲಿ ಜನತೆಗೆ ಶುದ್ದ ಕುಡಿಯುವ ನೀರು ಹಾಗೂ ಸ್ವಚ್ಚತೆ ಕಡೆ ಮೊದಲ ಆದ್ಯತೆ ನೀಡಬೇಕಾಗಿರುವುದರಿಂದ ಸರ್ವ ಸದಸ್ಯರ ಸಹಕಾರ ಅತ್ಯವಶ್ಯಕ. ಜಿಲ್ಲೆಯ ಕೆಲವು ಕಡೆ ಕಲುಷಿತ ನೀರು ಸೇವನೆಯಿಂದ ಉಂಟಾಗಿರುವ ಅವಘಡಗಳಿಂದ ನಾವುಗಳು ಎಚ್ಚೆತ್ತುಕೊಳ್ಳುವುದು ಉತ್ತಮ ಎಂದು ಹೇಳಿದರು.ಗ್ರಾಮ ಪಂಚಾಯಿತಿ ಉಪಾಧ್ಯಕ್ಷೆ ಮಂಜುಳ, ಸದಸ್ಯರುಗಳಾದ ಪಿ.ಎಸ್.ಸಿದ್ದೇಶ್, ದಿವಾಕರ್ ಸಂಕೋಳ್, ಕುಸುಮ, ಟಿ.ಚಂದ್ರಮ್ಮ ರೇವಣ್ಣ, ಚನ್ನಪ್ಪ ಹೆಚ್.ಪಿ. ರತ್ನಮ್ಮ ನಾಗರಾಜ್, ಮಂಜುಳ ಗಿರೀಶ್, ಜ್ಯೋತಿ ದೇವೇಂದ್ರಪ್ಪ, ಎಲ್.ತಿಪ್ಪೇಸ್ವಾಮಿ, ನವೀನ್‌ಗೌಡ, ರಂಜಿತ್, ಪಂಚಾಯಿತಿ ಅಭಿವೃದ್ದಿ ಅಧಿಕಾರಿ ನಾಗರಾಜ್, ಕಾರ್ಯದರ್ಶಿ ಸೋಮಣ್ಣ ಇವರುಗಳು ತುರ್ತು ಸಭೆಯಲ್ಲಿ ಹಾಜರಿದ್ದರು.

## ರಾಜ್ಯವನ್ನು ಕಗ್ಗತ್ತಲಲ್ಲಿ ಇಟ್ಟ ರಾಜ್ಯ ಕಾಂಗ್ರೆಸ್ ಸರ್ಕಾರ: ಸಿ.ಟಿ.ರವಿ

ಮುಂದಿನ ದಿನಗಳಲ್ಲಿ ರಾಜ್ಯದಲ್ಲಿ ವಿದ್ಯುತ್ ಕೊರತೆ ಎದುರಾಗಲಿದೆ. ರಾಜ್ಯವನ್ನು ಕಗ್ಗತ್ತಲಲ್ಲಿ ಮುಳುಗಿಸುವ ಕೆಲಸ ಸರ್ಕಾರ ಮಾಡ್ತಿದೆ ಎಂದು ಮಂಡ್ಯದಲ್ಲಿ ಬಿಜೆಪಿಯ ಮಾಜಿ ಶಾಸಕ ಸಿ.ಟಿ.ರವಿ ಕಾಂಗ್ರೆಸ್ ವಿರುದ್ಧ ವಾಗ್ದಾಳಿ ನಡೆಸಿದೆ. ರಾಜ್ಯದಲ್ಲಿ 200 ಯೂನಿಟ್ ಉಚಿತ ವಿದ್ಯುತ್ ನೀಡುತ್ತಿದೆ. ಆದರೆ ಮಧ್ಯಮ ವರ್ಗದವರ ಕರೆಂಟ್ ಬಿಲ್ ಡಬಲ್ ಬರುತ್ತಿದೆ. ಇದರಿಂದ ಸಣ್ಣ, ಮಧ್ಯಮ ಕೈಗಾರಿಕೆಗಳು ಸಂಕಷ್ಟಕ್ಕೆ ಸಿಲುಕಿವೆ. ಒಬ್ಬರಿಂದ ಕಿತ್ತುಕೊಂಡು ಮತ್ತೊಬ್ಬರಿಗೆ ಕೊಡುವ ಕೆಲಸ ಆಗ್ತಿದೆ. ಉಚಿತ ಯೋಜನೆಗಳ ಹೆಸರಿನಲ್ಲಿ ಜನರಿಗೆ ಮೋಸ ಮಾಡ್ತಿದ್ದಾರೆ. ಗ್ಯಾರಂಟಿ ಯೋಜನೆಗಳಿಗೆ ವಸ್ತುಗಳ ಬೆಲೆ ಏರಿಕೆಯಾಗಿ ಸಂಕಷ್ಟ ಎದುರಾಗಿದೆ ಎಂದು ವಾಗ್ದಾಳಿ ನಡೆಸಿದರು.

## ಅಧಿಕಾರಿಗಳಿಂದ 15 ಕಾರುಗಳು ವಶಕ್ಕೆ

ಅನಧಿಕೃತವಾಗಿ ಓಮ್ನಿ ಕಾರುಗಳಲ್ಲಿ ಮಕ್ಕಳನ್ನು ಕರೆದೊಯ್ಯುತ್ತಿದ್ದ ಹಿನ್ನೆಲೆ ಬೆಂಗಳೂರಿನಲ್ಲಿ ಖಖಿಔ ಅಧಿಕಾರಿಗಳಿಂದ 15ಕ್ಕೂ ಹೆಚ್ಚು ಕಾರುಗಳನ್ನು ವಶಕ್ಕೆ ಪಡೆಯಲಾಗಿದೆ. ವೈಟ್ ಬೋರ್ಡ್ ವಾಹನಗಳಲ್ಲಿ ಕರೆದೊಯ್ಯುವ ಕುರಿತು ದೂರು ಹಿನ್ನೆಲೆ ಶಾಲಾ ಬಸ್‌ಗಳನ್ನು ತಡೆದು ಖಖಿಔ ಅಧಿಕಾರಿಗಳು ಪರಿಶೀಲನೆ ನಡೆಸಿದ್ದರು. ಅನಧಿಕೃತವಾಗಿ ಮಕ್ಕಳನ್ನು ಕರೆದೊಯ್ಯುತ್ತಿದ್ದ ಹಿನ್ನೆಲೆ ಕಾರುಗಳನ್ನು ವಶಕ್ಕೆ ಪಡೆಯಲಾಗಿದೆ.

**ಪ್ರಮುಖ ಸುದ್ದಿ**

# ವಿದ್ಯಾರ್ಥಿಗಳಿಗೆ ವಾಸವಿ ವಿದ್ಯಾಸಂಸ್ಥೆಯಲ್ಲಿ ಪ್ರತಿಭಾ ಪುರಸ್ಕಾರ

» **ಚಿತ್ರದುರ್ಗ**

ಪ್ರತಿಭಾವಂತ ವಿದ್ಯಾರ್ಥಿಗಳು ಮತ್ತು ಸಾಧಕರನ್ನು ಗುರುತಿಸುವುದು ಸಮಾಜದ ಆದ್ಯ ಕರ್ತವ್ಯ ಎಂದು ಆರ್ಯವೈಶ್ಯ ಅಧಿಕಾರಿಗಳ ಮತ್ತು ವೃತ್ತಿನಿರತರ ಸಂಘಗಳ ಒಕ್ಕೂಟದ ರಾಜ್ಯಾಧ್ಯಕ್ಷ ಡಿ.ಸುಬ್ರಮಣ್ಯಶೆಟ್ಟಿ ತಿಳಿಸಿದರು.



ಆರ್ಯವೈಶ್ಯ ಅಧಿಕಾರಿಗಳು ಹಾಗೂ ವೃತ್ತಿನಿರತರ ಸಂಘದಿಂದ ವಾಸವಿ ವಿದ್ಯಾಸಂಸ್ಥೆಯಲ್ಲಿ ಎಸ್.ಎಸ್.ಎಲ್.ಸಿ./ದ್ವಿತೀಯ ಪಿ.ಯು.ಸಿ.ಯಲ್ಲಿ ಹೆಚ್ಚು ಅಂಕಗಳನ್ನು ಗಳಿಸಿರುವ ವಿದ್ಯಾರ್ಥಿಗಳಿಗೆ ಭಾನುವಾರ ಹಮ್ಮಿಕೊಳ್ಳಲಾಗಿದ್ದ ಪ್ರತಿಭಾ ಪುರಸ್ಕಾರ ಸಮಾರಂಭ ಉದ್ಘಾಟಿಸಿ ಮಾತನಾಡಿದರು.

ಶಿಕ್ಷಣದ ಜೊತೆ ವಿದ್ಯಾರ್ಥಿಗಳು ಸಾಮಾನ್ಯ ಜ್ಞಾನವನ್ನು ಹೆಚ್ಚು ತಿಳಿದುಕೊಂಡು ಬೇರೆಯವರಿಗೂ ತಿಳಿಸಬೇಕು. ನಾವು ಭಾರತೀಯರು ಎನ್ನುವ ಮನೋಭಾವನೆಯನ್ನು ಎಲ್ಲರೂ ಮೈಗೂಡಿಸಿಕೊಳ್ಳಿ. ಕೆಲವು ವಿಚಾರಗಳಲ್ಲಿ ನಮ್ಮ ದೇಶ ಇನ್ನು ಪರದೇಶವನ್ನು ಅವಲಂಭಿಸಿಕೊಂಡಿದೆ. ಮಕ್ಕಳಲ್ಲಿ ಸಂಸ್ಕಾರ, ಸಂಸ್ಕೃತಿ, ಮೌಲ್ಯಗಳನ್ನು ಬಿತ್ತುವ ಹೊಣೆಗಾರಿಕೆ ಶಿಕ್ಷಕರು ಹಾಗೂ ಪೋಷಕರುಗಳ ಮೇಲಿದೆ ಎಂದು ಹೇಳಿದರು.

ಒಳ್ಳೆಯ ವಿಚಾರಗಳು ಪಠ್ಯಪುಸ್ತಕಗಳಲ್ಲಿರಬೇಕು. ಇತ್ತೀಚಿನ ದಿನಗಳಲ್ಲಿ ಪಠ್ಯಪುಸ್ತಕಗಳಲ್ಲಿನ ಕೆಲವು ವಿಚಾರಗಳನ್ನು ತೆಗೆಯಲಾಗುತ್ತಿರುವುದು ನೋವಿನ ಸಂಗತಿ. ನಮ್ಮ ಜನಾಂಗದಲ್ಲಿರುವ ಕೆಲವು ಶ್ರೀಮಂತರು ಹಣ ಗಳಿಕೆಯಲ್ಲಿಯೇ ಕಾಲಕಳೆಯುವ ಬದಲು ದುಡಿಮೆಯಲ್ಲಿ ಸ್ವಲ್ಪ ಭಾಗವನ್ನು ಇಂತಹ ಕಾರ್ಯಗಳಿಗೆ ದಾನ ಮಾಡಿದರೆ ಒಳ್ಳೆಯದು. ಹತ್ತನೆ ತರಗತಿ ಮತ್ತು ಪಿ.ಯು.ಸಿ.ಯಲ್ಲಿ ಹೆಚ್ಚು ಅಂಕಗಳಿಸಿರುವವರನ್ನು ಸನ್ಮಾನಿಸುತ್ತಿರುವುದು ಸಂತೋಷದ ಸಂಗತಿ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಕುವೆಂಪು ವಿಶ್ವವಿದ್ಯಾನಿಲಯ ಶಂಕರಘಟ್ಟದ ಸಹ ಪ್ರಾಧ್ಯಾಪಕ ಡಾ.ನೆಲ್ಲಿಕಟ್ಟೆ ಎಸ್.ಸಿದ್ದೇಶ್ ಮಾತನಾಡಿ ಮಕ್ಕಳಲ್ಲಿರುವ ಸ್ವಂತ ಸಾಮರ್ಥ್ಯವನ್ನು ಕಂಡು ಹಿಡಿಯುವುದೇ ನಿಜವಾದ ಪ್ರತಿಭೆ. ಆಂತರಿಕ ಶ್ರೀಮಂತಿಕೆ ಪುರಸ್ಕಾರ, ಪ್ರತಿಭೆಗೆ ಪೂರಕ ಸಾಧನ. ವಿದ್ಯಾರ್ಥಿಗಳ ಏಳಿಗೆಗೆ ಇಂತಹ ಪುರಸ್ಕಾರಗಳು ಬೇಕು ಎಂದು ಹೇಳಿದರು. ಹಣದಿಂದ ಶಾಂತಿ, ನೆಮ್ಮದಿ ದೊರೆಯುವುದಿಲ್ಲ. ಅಂತರಂಗದ ವಿಶ್ವಾಸದಿಂದ ಮಾತ್ರ ನೆಮ್ಮದಿ ಕಂಡುಕೊಳ್ಳಲು ಸಾಧ್ಯ. ಜ್ಞಾನ, ಶಿಕ್ಷಣ, ಅರಿವು ಬೇಕು. ಅಕ್ಷರವಂತರು ಸಾಕಷ್ಟು ಇದ್ದಾರೆ. ಅಕ್ಕರೆವಂತರು ಸಿಕ್ಕಾಗ ಮಾತ್ರ ಇಂತಹ ಪ್ರತಿಭೆಗಳನ್ನು ಹೊರತರಲು ಸಹಕಾರಿಯಾಗಲಿದೆ. ನಾಯಕತ್ವ ಎನ್ನುವುದು ಮತ್ತೊಬ್ಬ ನಾಯಕನನ್ನು ಸೃಷ್ಠಿಸುವಂತಿರಬೇಕು. ತೆಂಗಿನ ಮರದಂತ ವ್ಯಕ್ತಿತ್ವ ಬೆಳೆಸಿಕೊಳ್ಳಬೇಕು. ಆಲದ ಮರದಂತಿರಬಾರದು. ಸದೃಢ, ಪ್ರಬುದ್ದ, ಸಾಮರಸ್ಯ ಭಾರತ ಕಟ್ಟಬೇಕಿದೆ ಎಂದರು.

ವಾಸವಿ ವಿದ್ಯಾಸಂಸ್ಥೆ ಅಧ್ಯಕ್ಷ ಎಸ್.ಎ.ಸತ್ಯನಾರಾಯಣಶೆಟ್ಟಿ ಮಾತನಾಡಿ ಮಕ್ಕಳಿಗೆ ಅಗತ್ಯವಿರುವಷ್ಟು ಸೌಲಭ್ಯಗಳನ್ನು ಮಾತ್ರ ಕೊಡಬೇಕು. ಮಕ್ಕಳೆಂಬ ಮಮಕಾರಕ್ಕೆ ಅತಿಯಾಗಿ ಪ್ರೀತಿ ತೋರಿಸಿದಾಗ ಕೆಲವೊಮ್ಮೆ ತಪ್ಪುದಾರಿಗೆ ಹೋಗುವುದುಂಟು. ಶಿಕ್ಷಣದ ಜೊತೆ ಸಂಸ್ಕಾರ ಕಲಿಸಬೇಕು ಎಂದು ಸಲಹೆ ನೀಡಿದರು. ಪಿ.ಎಲ್.ಸುರೇಶ್‌ರಾಜು ಮಾತನಾಡುತ್ತ ಸಾಧಕರನ್ನು ಗುರುತಿಸುವುದು ಅಭೂತಪೂರ್ವ ಕಾರ್ಯಕ್ರಮ. ದುಡಿಮೆಯನ್ನು ಸದ್ವಿನಿಯೋಗವಾಗುವಂತ ಕೆಲಸಕ್ಕೆ ಬಳಸುತ್ತಿರುವುದು ಮೆಚ್ಚುವಂತಹದ್ದು ಎಂದು ಶ್ಲಾಘಿಸಿದರು.

ಎಲ್.ಆರ್.ವೆಂಕಟೇಶ್‌ಕುಮಾರ್ ಮಾತನಾಡಿ ಮಕ್ಕಳು ಶಿಕ್ಷಣವಂತರಾಗುವ ಮೂಲಕ ಗುರು-ಹಿರಿಯರು, ಪೋಷಕರು, ಸಮಾಜಕ್ಕೆ ಒಳ್ಳೆ ಕೀರ್ತಿ ತರಬೇಕು. ದೀಪದ ರೀತಿಯಲ್ಲಿ ಬೆಳಗಿ ಬೇರೆಯವರಿಗೆ ಬೆಳಕು ನೀಡಬೇಕು ಎಂದು ಪ್ರತಿಭಾವಂತ ಮಕ್ಕಳನ್ನು ಹಾರೈಸಿದರು.

ನಿವೃತ್ತ ಪ್ರಾಚಾರ್ಯರಾದ ಟಿ.ವಿ.ಸುರೇಶ್‌ಗುಪ್ತ ಮಾತನಾಡುತ್ತ ಪ್ರತಿಭಾವಂತ ಮಕ್ಕಳು ತಮ್ಮ ಆಯ್ಕೆಗೆ ಅನುಗುಣವಾಗಿ ಶಿಕ್ಷಣದ ಕಡೆ ಹೆಚ್ಚಿನ ಗಮನ ಕೊಟ್ಟು ಜೀವನದಲ್ಲಿ ಉತ್ತಮ ಭವಿಷ್ಯವನ್ನು ರೂಪಿಸಿಕೊಳ್ಳಿ. ಹಿಂದುಳಿದ ವರ್ಗಗಳಹರಿಕಾರದಿವಂಗತಡಿ.ದೇವರಾಜ ಅರಸು, ಕನ್ನಡ ಸಾಹಿತ್ಯದಲ್ಲಿ ವಿಶಿಷ್ಟ ಸ್ಥಾನ ಗಳಿಸಿರುವ ಎಸ್.ಎಲ್.ಭೈರಪ್ಪನವರ ಜನ್ಮದಿನದಂದು ಮಕ್ಕಳಿಗೆ ಪ್ರತಿಭಾ ಪುರಸ್ಕಾರ ನೆರವೇರಿಸುತ್ತಿರುವುದು ಒಂದು ಸುದೈವ ಎಂದು ಸಂತಸ ವ್ಯಕ್ತಪಡಿಸಿದರು.

ಪಾಮಡಿ ಸುಬ್ಬರಾಮಶ್ರೇಷ್ಠಿರವರು ಮಂತ್ರಿಯಾಗಲು ಅಭಿಮಾನಿಗಳು ಪ್ರೇರಣೆ ನೀಡಿದಾಗ ನಯವಾಗಿ ದೂರಸರಿಸಿ ಕೊನೆಗೆ ಜವಾಹರಲಾಲ ನೆಹರುರವರ ಒತ್ತಡಕ್ಕೆ ಮಣಿದು ಒಂದು ವರ್ಷ ಮಾತ್ರ ಮಂತ್ರಿಯಾಗಿ ಅನೇಕ ಜನಪರ ಕೆಲಸಗಳನ್ನು ಮಾಡಿದರು. ಇಂತಹ ಪ್ರಾಮಾಣಿಕರೆಲ್ಲಾ ನಿಮಗೆ ಆದರ್ಶವಾಗಬೇಕೆಂದು ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು.

ಕನ್ನಡ ಸಾಹಿತ್ಯ ಪರಿಷತ್ ತಾಲ್ಲೂಕು ಅಧ್ಯಕ್ಷರಾದ ರಾಮಲಿಂಗಶ್ರೇಷ್ಠಿ, ತುಮಕೂರಿನ ರಾಧಕೃಷ್ಣನ್, ಡಾ.ರಾಮಲಿಂಗಶೆಟ್ಟಿ, ವೇದಿಕೆಯಲ್ಲಿದ್ದರು. ಪಿ.ಎನ್.ಮೋಹನ್ ಅಧ್ಯಕ್ಷತೆ ವಹಿಸಿದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T